ಸಂಪಾದಕರು :
ಎಂ.ಎಸ್. ವಿಕಾಸ್

ಸೋಮವಾರ, ಏಪ್ರಿಲ್ 08, 2024
ದಾವಣಗೆರೆ, ಪುಟ : 4 ರೂ : 5
ಸಂಪುಟ : 50 ಸಂಚಿಕೆ : 328 RNI : 27369/75

# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

50 1974 2023

janathavani@mac.com
www.janathavani.com
08192 254736 91642 99999




## ದಕ್ಷಿಣ, ಪೂರ್ವದಲ್ಲಿ ಬಿಜೆಪಿ ಮತ ಗಳಿಕೆ ಏರಿಕೆ



### ಚುನಾವಣಾ ಪರಿಣಿತ ಪ್ರಶಾಂತ್ ಕಿಶೋರ್ ಭವಿಷ್ಯ

ನವದೆಹಲಿ, ಏ. 7 - ದೇಶದ ದಕ್ಷಿಣ ಹಾಗೂ ಪೂರ್ವ ಭಾಗದಲ್ಲಿ ಬಿಜೆಪಿ ತನ್ನ ಮತ ಗಳಿಕೆ ಪ್ರಮಾಣ ಹೆಚ್ಚಿಸಿಕೊಳ್ಳಲಿದೆ ಎಂದು ಚುನಾವಣಾ ಪರಿಣಿತ ಪ್ರಶಾಂತ್ ಕಿಶೋರ್ ಹೇಳಿದ್ದಾರೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಬಿಜೆಪಿ ಬಲಿಷ್ಠವಾಗಿದ್ದರೂ ಸಹ ವಿರೋಧ ಪಕ್ಷಗಳಿಗೆ ಗೆಲುವು ಅಸಾಧ್ಯವೇನೂ ಅಲ್ಲ. ಆದರೆ, ವಿಪಕ್ಷಗಳು ಈ ಅವಕಾಶ ಕೈ ಚೆಲ್ಲಿವೆ ಎಂದು ಕಿಶೋರ್ ಹೇಳಿದ್ದಾರೆ.

ತೆಲಂಗಾಣದಲ್ಲಿ ಬಿಜೆಪಿ ಮೊದಲ ಇಲ್ಲವೇ ಎರಡನೇ ಪಕ್ಷವಾಗಲಿದೆ. ಇದು ದೊಡ್ಡ ಸಾಧನೆಯಾಗಲಿದೆ. ಒಡಿಶಾದಲ್ಲೂ ಅವರು ಮೊದಲ ಸ್ಥಾನದಲ್ಲಿರಲಿದ್ದಾರೆ. ಪಶ್ಚಿಮ ಬಂಗಾಳದಲ್ಲೂ ಮೊದಲ ಸ್ಥಾನದಲ್ಲಿರಲಿದೆ ಎಂದವರು ಭವಿಷ್ಯ ನುಡಿದಿದ್ದಾರೆ.

ತೆಲಂಗಾಣ, ಒಡಿಶಾ, ಪಶ್ಚಿಮ ಬಂಗಾಳ, ತಮಿಳುನಾಡು, ಆಂಧ್ರ ಪ್ರದೇಶ, ಬಿಹಾರ ಹಾಗೂ ಕೇರಳಗಳಲ್ಲಿ 204 ಲೋಕಸಭಾ ಸ್ಥಾನಗಳಿವೆ. ಆದರೆ, 2014 ಹಾಗೂ 2019ರ ಚುನಾವಣೆಯಲ್ಲಿ ಬಿಜೆಪಿ ಈ ಪೈಕಿ 50 ಸ್ಥಾನಗಳನ್ನೂ ಪಡೆಯಲು ಸಾಧ್ಯವಾಗಿರಲಿಲ್ಲ. 2014ರಲ್ಲಿ 29 ಹಾಗೂ 2019ರಲ್ಲಿ 47 ಸ್ಥಾನ ಮಾತ್ರ ಪಡೆಯಲು ಸಾಧ್ಯವಾಗಿತ್ತು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಉತ್ತರ ಹಾಗೂ ಪಶ್ಚಿಮ ಭಾರತದಲ್ಲಿ ಕನಿಷ್ಠ 100 ಸ್ಥಾನ ಪಡೆದರೆ ಮಾತ್ರ ಬಿಜೆಪಿಗೆ ಬಿಸಿ ಮುಟ್ಟಿಸಲು ಸಾಧ್ಯವಾಗಲಿದೆ. ಆದರೆ, ಈ ವಲಯಗಳಲ್ಲಿ ಬಿಜೆಪಿ ತನ್ನ ಬಿಗಿ ಹಿಡಿತ ಹೊಂದಿದೆ ಎಂದು ಕಿಶೋರ್ ಹೇಳಿದ್ದಾರೆ.

ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಸೇರಿದಂತೆ ಹಲವು ಉನ್ನತ ನಾಯಕರು ದಕ್ಷಿಣ ಹಾಗೂ ಪೂರ್ವ ಭಾರತದಲ್ಲಿ ವ್ಯಾಪಕ ಪ್ರಚಾರ ನಡೆಸುತ್ತಿದ್ದಾರೆ. ಮತ್ತೊಂದೆಡೆ ಈ ರಾಜ್ಯಗಳಲ್ಲಿ ವಿಪಕ್ಷಗಳು ಹೆಚ್ಚು ಪ್ರಯತ್ನ ನಡೆಸುತ್ತಿರುವುದು ಕಂಡು ಬರುತ್ತಿಲ್ಲ ಎಂದೂ ಕಿಶೋರ್ ತಿಳಿಸಿದ್ದಾರೆ.

ಕಳೆದ ಐದು ವರ್ಷಗಳಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ತಮಿಳುನಾಡಿಗೆ ಎಷ್ಟು ಬಾರಿ ಭೇಟಿ ನೀಡಿದ್ದಾರೆ ಎಂಬುದನ್ನು ಎಣಿಸಿ. ಕಾಂಗ್ರೆಸ್ ಮಾಜಿ ಅಧ್ಯಕ್ಷರಾದ ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಇಲ್ಲವೇ ಪ್ರತಿಪಕ್ಷದ ಇತರೆ ಸದಸ್ಯರು ಎಷ್ಟು ಭೇಟಿ ನೀಡಿದ್ದಾರೆ ಎಂಬುದನ್ನು ಲೆಕ್ಕ ಹಾಕಿ ಎಂದು ಕಿಶೋರ್ ಹೇಳಿದ್ದಾರೆ.

ಉತ್ತರ ಪ್ರದೇಶ, ಬಿಹಾರ ಹಾಗೂ ಮಧ್ಯಪ್ರದೇಶಗಳಲ್ಲಿ ಚುನಾವಣಾ ಹೋರಾಟ ಇದೆ. ಆದರೆ, ಅವರು ಮಣಿಪುರ ಹಾಗೂ ಮೇಘಾಲಯಗಳ ಪ್ರವಾಸ (2ನೇ ಪುಟಕ್ಕೆ)

## ಶೀಘ್ರ ನಿರ್ಧಾರ ಪ್ರಕಟ : ವದಂತಿಗಳಿಗೆ ಕಿವಿಗೊಡದಿರಿ




### ವಿನಯ್‌ಕುಮಾರ್ ಮನವಿ

ದಾವಣಗೆರೆ, ಏ. 7- ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದಲ್ಲಿನ ಬಂಡಾಯ ಶಮನವಾಗಿದೆ. ಪಕ್ಷೇತರನಾಗಿ ಸ್ಪರ್ಧಿಸುವುದಿಲ್ಲವಂತೆ ಎಂಬ ಮಾತುಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಈ ಬಗ್ಗೆ ಕಾರ್ಯಕರ್ತರಲ್ಲಿ ಗೊಂದಲ ಬೇಡ. ಇನ್ನೆರಡು ದಿನಗಳಲ್ಲಿ ಬಾಕಿ ಇರುವ ಮಾಯಕೊಂಡ ಮತ್ತು ದಾವಣಗೆರೆ ಉತ್ತರ ವಿಧಾನಸಭಾ ಕ್ಷೇತ್ರಗಳ ಜನತೆಯ ಅಭಿಪ್ರಾಯ ಸಂಗ್ರಹಿಸಿ, ನಂತರ ನನ್ನ ಅಂತಿಮ ನಿರ್ಧಾರವನ್ನು ಪತ್ರಿಕಾಗೋಷ್ಠಿಯ ಮುಖಾಂತರ ಘೋಷಿಸುವುದಾಗಿ ಭಾರತೀಯ ರಾಷ್ಟ್ರೀಯ ಯುವ ಕಾಂಗ್ರೆಸ್ ಕರ್ನಾಟಕ ರಾಜ್ಯ ಔಟ್ರೀಚ್ ಘಟಕದ ಉಪಾಧ್ಯಕ್ಷ ಜಿ.ಬಿ. ವಿನಯ್ ಕುಮಾರ್ ಸ್ಪಷ್ಟಪಡಿಸಿದ್ದಾರೆ.

ಈ ಸಂಬಂಧ ನಾಳೆ ದಿನಾಂಕ 8 ರ ಸೋಮವಾರ ಬೆಳಿಗ್ಗೆ 10.30 ಕ್ಕೆ ನಗರದ ಎಸ್. ಎಸ್. ಬಡಾವಣೆಯಲ್ಲಿರುವ ತಮ್ಮ ಗೃಹ ಕಚೇರಿಯಲ್ಲಿ ಕಾರ್ಯಕರ್ತರ (2ನೇ ಪುಟಕ್ಕೆ)

# ಹೊರಾಂಗಣ ಕೆಲಸಕ್ಕೆ ಮಿತಿ

## ಕಡು ಬಿಸಿಲು ಹೆಚ್ಚಳದ ಹಿನ್ನೆಲೆಯಲ್ಲಿ ಪರಿಣಿತರ ಸಲಹೆ



ನವದೆಹಲಿ, ಏ. 7 - ಈ ಬಾರಿ ಬೇಸಿಗೆಯಲ್ಲಿ ಕಂಡು ಬರುತ್ತಿರುವ ಕಡು ಬಿಸಿಲು ಹೊರಾಂಗಣದಲ್ಲಿ ಕೆಲಸ ಮಾಡುವವರ ಮೇಲೆ ಪರಿಣಾಮ ಬೀರ ಬಹುದು ಎಂದು ಪರಿಣಿತರು ಎಚ್ಚರಿಕೆ ನೀಡಿದ್ದಾರೆ.

ಈ ವರ್ಷ ಏಪ್ರಿಲ್ - ಜೂನ್ ತಿಂಗಳಲ್ಲಿ ತಾಪಮಾನ ವಾಡಿಕೆಗಿಂತ ಹೆಚ್ಚಾಗಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಿಶೇಷವಾಗಿ ಮಧ್ಯ ಹಾಗೂ ಪಶ್ಚಿಮ ಭಾಗಗಳಲ್ಲಿ ಪರಿಸ್ಥಿತಿ ಇನ್ನಷ್ಟು ಕಠಿಣವಾಗಿರಲಿದೆ.

ಅಲ್ಲದೇ ರಾತ್ರಿ ವೇಳೆಯೂ ತಾಪಮಾನ ವಾಡಿಕೆಗಿಂತ ಹೆಚ್ಚಾಗಿರಲಿದ್ದು, ಇದು ನಿದ್ರೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಹೊಲ, ಕಟ್ಟಡ ನಿರ್ಮಾಣ ಮತ್ತಿತರೆ ವಲಯಗಳಲ್ಲಿ ಕೆಲಸ ಮಾಡುವವರ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕಿದೆ. ಕೆಲಸದ ಅವಧಿಯಲ್ಲಿ ಹೊಂದಾಣಿಕೆ ಮಾಡಬೇಕು ಹಾಗೂ ಕಡ್ಡಾಯವಾಗಿ ಬಿಡುವು ನೀಡಬೇಕು ಎಂದು ಪರಿಣಿತರು ಹೇಳಿದ್ದಾರೆ. ಒಣ ಬಿಸಿಲಿದ್ದರೆ ಸುಲಭವಾಗಿ ನಿಭಾಯಿಬಹುದು. ಇಂತಹ ಬಿಸಿಲಿನಲ್ಲಿ ನೀರು ಕುಡಿದರಷ್ಟೇ ಪರಿಸ್ಥಿತಿ ಸುಧಾರಿಸುತ್ತದೆ. ಆದರೆ, ಬಿಸಿಲಿನ ಜೊತೆಗೆ ಆರ್ದ್ರತೆಯೂ ಇದ್ದಾಗ ಸಮಸ್ಯೆ ಇನ್ನಷ್ಟು ಹೆಚ್ಚಾಗುತ್ತದೆ ಎಂದು ಐ.ಐ.ಟಿ. ಗಾಂಧಿನಗರದ ಸಿವಿಲ್ ಇಂಜಿನಿಯರಿಂಗ್ ಹಾಗೂ ಭೂ ವಿಜ್ಞಾನ ವಿಭಾಗದ ಉಪನ್ಯಾಸಕ ವಿಮಲ್ ಮಿಶ್ರ ಹೇಳಿದ್ದಾರೆ.

ಆರ್ದ್ರತೆಯ ಬಿಸಿಲು ಇದ್ದಾಗ, ದೇಹದ ಬೆವರಿನ ಪ್ರಕ್ರಿಯೆಯ ಮೇಲೆ ಪರಿಣಾಮವಾಗುತ್ತದೆ. ದೇಹದ ತಾಪಮಾನವೂ ಹೆಚ್ಚಾಗುತ್ತದೆ. ಇಂತಹ ಪರಿಸ್ಥಿತಿಯಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುವುದು ಅಪಾಯ ತರುತ್ತದೆ ಎಂದವರು ತಿಳಿಸಿದ್ದಾರೆ. ಆಫ್ರಿಕ ಹಾಗೂ ಭಾರತದಲ್ಲಿ ಕೆಲಸದ ವಯೋಮಾನವದರ ಸಂಖ್ಯೆ ಹೆಚ್ಚಾಗಿದೆ. ಈ ವಲಯಗಳಲ್ಲಿ ತಾಪಮಾನ (2ನೇ ಪುಟಕ್ಕೆ)

## ಬಿಸಿಲ ಬಿರುಸು, ಕಲಬುರಗಿಯಲ್ಲಿ 43.1 ಡಿಗ್ರಿ ತಾಪಮಾನ

## ದಾವಣಗೆರೆಯಲ್ಲೂ ಹೆಚ್ಚಿದ ಬಿಸಿಲ ಬೇಗೆ : ಎಚ್ಚರಿಕೆ



ಬೆಂಗಳೂರು, ಏ. 7 – ರಾಜ್ಯದ ಹಲವು ಭಾಗಗಳಲ್ಲಿ ಬಿಸಿಲು ತೀವ್ರವಾಗಿದ್ದು, ಕಲಬುರಗಿ ಜಿಲ್ಲೆಯಲ್ಲಿ ರಾಜ್ಯದಲ್ಲೇ ಅತಿ ಹೆಚ್ಚಿನ 43.1 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ಬೆಂಗಳೂರಿನಲ್ಲಿ 37.6 ಡಿಗ್ರಿ ತಾಪಮಾನ ದಾಖಲಾಗಿದೆ. ಇದು ನಗರದಲ್ಲಿ ಕಳೆದ ಎಂಟು ವರ್ಷಗಳಲ್ಲೇ ದಾಖಲೆಯ ತಾಪವಾಗಿದೆ.

ರಾಯಚೂರಿನಲ್ಲಿ 41.8, ಬಾಗಲಕೋಟೆಯಲ್ಲಿ 41.5, ಕೊಪ್ಪಳದಲ್ಲಿ 41.3 ಹಾಗೂ ವಿಜಯಪುರದಲ್ಲಿ 41 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಕೊಡಗು ಹಾಗೂ ಶಿವಮೊಗ್ಗಗಳಲ್ಲಿ ಮುಂದಿನ 24 ಗಂಟೆಗಳಲ್ಲಿ ಚೆದುರಿದ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ದಕ್ಷಿಣ ಕನ್ನಡ, ಉಡುಪಿ, ಕೊಡಗು ಹಾಗೂ ಚಿಕ್ಕಮಗಳೂರಿನ ಪಶ್ಚಿಮ ಭಾಗಗಳಲ್ಲಿ ಮುಂದಿನ ಎರಡು ದಿನಗಳ ಕಾಲ ಒಣ ಹವೆ ಮುಂದುವರೆಯಲಿದೆ.

ಉತ್ತರ ಒಳನಾಡಿನಲ್ಲಿ ತಾಪಮಾನ ವಾಡಿಕೆಗಿಂತ 2ರಿಂದ 4 ಡಿಗ್ರಿ ಸೆಲ್ಸಿಯಸ್ ಹೆಚ್ಚಾಗಿರಲಿದೆ. ಬೆಂಗಳೂರು ಗ್ರಾಮಾಂತರ ಹಾಗೂ ನಗರ ಜಿಲ್ಲೆ, ರಾಮನಗರ, ಶಿವಮೊಗ್ಗ, ದಾವಣಗೆರೆ, ಮೈಸೂರು, ಮಂಡ್ಯ, ಹಾಸನ ಹಾಗೂ ತುಮಕೂರು ಜಿಲ್ಲೆಗಳಲ್ಲಿ ತಾಪಮಾನ 4 ಡಿಗ್ರಿ ಸೆಲ್ಸಿಯಸ್‌ವರೆಗೆ ಹೆಚ್ಚಾಗಿರಲಿದೆ ಎಂದು ತಿಳಿಸಲಾಗಿದೆ.

ಉತ್ತರ ಕನ್ನಡ, ಬೆಳಗಾವಿ, ಬಾಗಲಕೋಟೆ, ಧಾರವಾಡ, ರಾಯಚೂರು ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಮುಂದಿನ ಎರಡು ದಿನಗಳ ಕಾಲ ರಾತ್ರಿ ತಾಪಮಾನ ಹೆಚ್ಚಾಗಿರಲಿದೆ (2ನೇ ಪುಟಕ್ಕೆ)

## ಶಿಕ್ಷಣ, ಆರೋಗ್ಯ, ಕೈಗಾರಿಕಾ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ



### ಜಗಳೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್ ಮತ ಪ್ರಚಾರ

ಜಗಳೂರು, ಏ.7- ಶಿಕ್ಷಣ, ಆರೋಗ್ಯ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಮತ ನೀಡಿ ಎಂದು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಮನವಿ ಮಾಡಿದರು.

ತಾಲ್ಲೂಕಿನ ಬಸವನಕೋಟೆ, ಗುರು ಸಿದ್ದಾಪುರ, ಸೊಕ್ಕೆ, ಹೊಸಕೆರೆ, ಕೆಚ್ಚೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರೋಡ್ ಶೋ ಮೂಲಕ ಬಿರುಸಿನ ಚುನಾವಣಾ ಪ್ರಚಾರದಲ್ಲಿ ಪಾಲ್ಗೊಂಡು ಮತಯಾಚಿಸಿ ಮಾತನಾಡಿದರು.

ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳು ರಾಜ್ಯದ ಜನತೆಗೆ ವರದಾನವಾಗಿವೆ. ಅನ್ನಭಾಗ್ಯ, ಗೃಹಲಕ್ಷ್ಮಿ,ಶಕ್ತಿ ಯೋಜನೆಗಳ ಫಲಾನುಭವಿಗಳಾದ ಮಹಿಳೆಯರು ಹಾಗೂ ವಿಧ್ಯಾನಿಧಿ ಪಡೆಯುವ ನಿರುದ್ಯೋಗಿ ಪದವೀಧರರು ಕಾಂಗ್ರೆಸ್ ಪಕ್ಷವನ್ನು ಕೈಬಿಡಬಾರದು.ಕಾಂಗ್ರೆಸ್ ಪಕ್ಷ ಮುಂದೆಯೂ ನುಡಿದಂತೆ ನಡೆಯುತ್ತದೆ ಎಂದರು. ಗೆಲುವಿನ ನಂತರ ಜಗಳೂರು ವಿಧಾನ ಸಭಾ ಕ್ಷೇತ್ರದ ಸಮಗ್ರ ಅಭಿವೃದ್ದಿಗೆ ಸ್ಥಳೀಯ ಶಾಸಕರೊಂದಿಗೆ ಕೈಜೋಡಿಸುವೆ ಎಂದು ಹೇಳಿದರು.

ರಾಜಕೀಯ ಅನುಭವ ಹೊಂದಿದ ಕುಟುಂಬದ ಸೊಸೆಯಾಗಿರುವ ನಾನು, ಕ್ಷೇತ್ರದಲ್ಲಿನ ಜ್ವಲಂತ ಸಮಸ್ಯೆಗಳನ್ನು ಅರಿತುಕೊಂಡಿದ್ದೇನೆ. ನನ್ನ ಪತಿ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಕಾಂಗ್ರೆಸ್ ಪಕ್ಷದಿಂದ ಶಾಸಕರಾಗಿ ಆಯ್ಕೆಯಾಗಿ ಸಚಿವರಾಗಿದ್ದಾರೆ. ನಾನು ಅದೇ ಕುಟುಂಬದ ಸದಸ್ಯೆಯಾಗಿ ಲೋಕಸಭಾ ಕ್ಷೇತ್ರಕ್ಕೆ ಮಹಿಳಾ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದು, ಈ ಬಾರಿ ನನ್ನನ್ನು ಅಧಿಕ ಮತಗಳ ಅಂತರದಿಂದ ಗೆಲ್ಲಿಸುವ ಆತ್ಮ ವಿಶ್ವಾಸ ಹೊಂದಿರುವೆ ಎಂದು ತಿಳಿಸಿದರು.

ಕಳೆದ 15 ದಿನಗಳ ಹಿಂದೆ ಶಕ್ತಿದೇವತೆ ಚೌಡೇಶ್ವರಿ ರಥೋತ್ಸವದಲ್ಲಿ ದೇವಿ ಆಶೀರ್ವಾದ ಪಡೆದಿದ್ದೇನೆ. ಮತದಾರರ ಬಂಧುಗಳ ಆಶೀರ್ವಾದ ಮೇ.7 ರಂದು (2ನೇ ಪುಟಕ್ಕೆ)

## ಬೀದಿ ಬದಿ ವ್ಯಾಪಾರಿಗಳಿಗೆ ಪಿಎಂ ಸ್ವ-ನಿಧಿ ಸಂಜೀವಿನಿ



### ಹಳೇ ದಾವಣಗೆರೆ ಭಾಗದಲ್ಲಿ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ಪ್ರಚಾರ

ದಾವಣಗೆರೆ, ಏ.7- ದೇಶದ ಕೋಟ್ಯಂತರ ಬೀದಿ ಬದಿ ವ್ಯಾಪಾರಿಗಳು ಬದುಕು ರೂಪಿಸಿಕೊಳ್ಳಲು, ಜೀವನ ಮಟ್ಟ ಸುಧಾರಿಸಿಕೊಳ್ಳಲು ಪ್ರಧಾನ ಮಂತ್ರಿ ಸ್ವ-ನಿಧಿ ಯೋಜನೆ ಸಂಜೀವಿನಿಯಾಗಿದೆ ಎಂದು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ತಿಳಿಸಿದರು.

ಹಳೇ ದಾವಣಗೆರೆ ಭಾಗದ ಗಡಿಯಾರದ ಕಂಬ, ಕಾಯಿಪೇಟೆ ಮಾರ್ಕೆಟ್ ಸೇರಿದಂತೆ ವಿವಿಧ ಭಾಗಗಳಲ್ಲಿ ಬೀದಿ ಬದಿ ವ್ಯಾಪಾರಿಗಳ ಜೊತೆ ಚರ್ಚೆ ನಡೆಸಿ, ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಜೀ ಅವರು ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಸ್ವ-ನಿಧಿ ಯೋಜನೆ ಬೀದಿ ಬದಿ ವ್ಯಾಪಾರಿಗಳು ಸ್ವಾವಲಂಬಿಯಾಗಿ ಜೀವನ ನಡೆಸಲು ಸಹಕಾರಿಯಾಗಿದೆ ಎಂದರು.

ಕೋವಿಡ್ ಬಳಿಕ ಬೀದಿ ಬದಿ ವ್ಯಾಪಾರಿಗಳ ಬದುಕು ದುಸ್ತರವಾಗಿತ್ತು. ಲೇವಾದೇವಿಗಳ ಬಳಿಕ ಅಧಿಕ ಬಡ್ಡಿಗೆ ಹಣ ತಂದು ಸಂಕಷ್ಟಕ್ಕೆ ಒಳಗಾಗಿದ್ದರು. ಅವರೆಲ್ಲರಿಗೂ ಪ್ರಧಾನಿ ನರೇಂದ್ರ ಮೋದಿ ಅವರು ಒಬ್ಬ ಸಹೋದರನಾಗಿ, ಮನೆ ಮಗನಾಗಿ ಬೆನ್ನಿಗೆ ನಿಂತು ಪಿಎಂ ಸ್ವ-ನಿಧಿ ಯೋಜನೆ ಜಾರಿಗೆ ತಂದರು. ತಳ್ಳುವ ಗಾಡಿ, ಹಣ್ಣು ವ್ಯಾಪಾರಿಗಳು, ಬೀದಿ ಬದಿ ಉಡುಪು ಮಾರಾಟಗಾರರು, ಕ್ಷೌರಿಕರು, ಲಾಂಡ್ರಿ, ಪಂಕ್ಚರ್ ಶಾಪ್ ಸೇರಿದಂತೆ ಎಲ್ಲ ಬಗೆಯ ಬೀದಿ ಬದಿ ವ್ಯಾಪಾರಿಗಳಿಗೆ ಅತ್ಯಂತ ಕಡಿಮೆ ಬಡ್ಡಿಯಲ್ಲಿ ಲೋನ್ ನೀಡುವ ಮೂಲಕ ಆರ್ಥಿಕವಾಗಿ ಚೇತರಿಸಿಕೊಳ್ಳಲು ಸಹಾಯ ಮಾಡಿದ್ದಾರೆ ಎಂದರು.

ಪಿಎಂ ಸ್ವ-ನಿಧಿ ಯೋಜನೆ ಅಡಿ ಬೀದಿ ಬದಿ ವ್ಯಾಪಾರಿಗಳಿಗೆ ಮೊದಲ ಹಂತದಲ್ಲಿ 10 ಸಾವಿರ, 2ನೇ ಹಂತದಲ್ಲಿ 20 ಸಾವಿರ, 3ನೇ ಹಂತದಲ್ಲಿ 50 ಸಾವಿರ ಸಾಲ ನೀಡಿ ಆರ್ಥಿಕ ಸಹಾಯ ಮಾಡಲಾಗಿದೆ. (2ನೇ ಪುಟಕ್ಕೆ)

## ಚಿರಸ್ಮರಣೆ



ದಿವಂಗತ ಬೆಣ್ಣೆಹಳ್ಳಿ ಚನ್ನಬಸಪ್ಪ
ದಿವಂಗತ ಬೆಣ್ಣೆಹಳ್ಳಿ ಚನ್ನಬಸಮ್ಮ

(ಅ)ಜ್ಜಮ್ಮ...
ನೀವು ನಮ್ಮನ್ನಗಲಿ ವರುಷಗಳೇ ಉರುಳಿದರೂ ನಿಮ್ಮಗಳ ಸವಿನೆನಪು ನಮ್ಮಲ್ಲಿ ಹಸಿರಾಗಿ, ಉಸಿರಾಗಿ ನಮ್ಮೀ ಬದುಕಿಗೆ ದಾರಿದೀಪವಾಗಿ ಮುನ್ನಡೆಸುತ್ತಲಿದೆ...
ಭಗವಂತನು ನಿಮ್ಮಗಳ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಪ್ರಾರ್ಥಿಸುವ...

ಸದಾ ನಿಮ್ಮ ನೆನಪಲ್ಲಿರುವ...
ಮೊಮ್ಮಕ್ಕಳು, ಮರಿಮಕ್ಕಳು ಮತ್ತು ಗಿರಿಮಕ್ಕಳು...
ಮಲೇಬೆನ್ನೂರು, ಹರಿಹರ.
ಬಿ. ಚಂದ್ರಶೇಖರ್ ಲ್ಯಾಂಡ್ ಆರ್ಮಿ
ನಿವೃತ್ತ ಕಾರ್ಯಪಾಲಕ ಅಭಿಯಂತರರು, ದಾವಣಗೆರೆ.

# ನವೀಕರಣ ವಿದ್ಯುತ್‌ಗೆ ಅದಾನಿಯಿಂದ 2.30 ಲಕ್ಷ ಕೋಟಿ ರೂ. ಹೂಡಿಕೆ



ಅಹಮದಾಬಾದ್, ಏ. 7 - ಭಾರತದ ಮಹತ್ವಾಕಾಂಕ್ಷಿ ನವೀಕರಣ ಇಂಧನ ವಿಸ್ತರಣೆ, ಸೌರ ಹಾಗೂ ಪವನ ವಿದ್ಯುತ್ ವಲಯದಲ್ಲಿ 2.30 ಲಕ್ಷ ಕೋಟಿ ರೂ.ಗಳನ್ನು ಹೂಡಿಕೆ ಮಾಡಲು ಅದಾನಿ ಸಮೂಹ ನಿರ್ಧರಿಸಿದೆ.

ಅದಾನಿ ಗ್ರೀನ್ ಎನರ್ಜಿ ಕಂಪನಿಯು ಗುಜರಾತ್‌ನ ಖಾವ್ಡಾದಲ್ಲಿನ ಸೌರ ಹಾಗೂ ಪವನ ವಿದ್ಯುತ್ ಸಾಮರ್ಥ್ಯವನ್ನು ಈಗಿರುವ 2 ಗಿಗಾ ವ್ಯಾಟ್‌ಗಳಿಂದ 30 ಗಿಗಾ ವ್ಯಾಟ್‌ಗಳಿಗೆ ಹೆಚ್ಚಿಸಲು 1.50 ಲಕ್ಷ ಕೋಟಿ ರೂ.ಗಳ ಹೂಡಿಕೆ ಮಾಡಲಿದೆ. ದೇಶದ ಇತರೆಡೆ 6-7 ಗಿಗಾ ವ್ಯಾಟ್ ಸಾಮರ್ಥ್ಯದ ವಿದ್ಯುತ್ ಯೋಜನೆಗಳಿಗಾಗಿ 50 ಸಾವಿರ ಕೋಟಿ ರೂ. ಹೂಡಿಕೆ ಮಾಡಲಾಗುವುದು ಎಂದು ಕಂಪನಿಯ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಅದಾನಿ ಗ್ರೀನ್ ಎನರ್ಜಿಯು ಪ್ರಸಕ್ತ 10.93 ಗಿಗಾವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿದೆ. ಇದು ಭಾರತದ ಅತಿ ದೊಡ್ಡ ನವೀಕರಣ ವಿದ್ಯುತ್ ಉತ್ಪಾದನಾ ಕಂಪನಿಯಾಗಿದೆ 2030ರ ವೇಳೆಗೆ 45 ಗಿಗಾವ್ಯಾಟ್ ನವೀಕರಣ ವಿದ್ಯುತ್ ಉತ್ಪಾದಿಸುವ ಗುರಿ ಕಂಪನಿಗಿದೆ. ಆ ವೇಳೆಗೆ ಖಾವ್ಡಾ ಒಂದರಿಂದಲೇ 30 ಜಿ.ಡಬ್ಲ್ಯೂ. ವಿದ್ಯುತ್ ದೊರೆಯಲಿದೆ. ಆ ವೇಳೆಗೆ ಖಾವ್ಡಾ ವಿಶ್ವದ ಅತಿ ದೊಡ್ಡ ನವೀಕರಣ ವಿದ್ಯುತ್ ಉತ್ಪಾದನಾ ಕೇಂದ್ರವಾಗಲಿದೆ.

ಈ ಬಗ್ಗೆ ಮಾತನಾಡಿರುವ ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ವಿನೀತ್ ಎಸ್. ಜೈನ್, ನಾವು ಖಾವ್ಡಾದಲ್ಲಿ 2 ಗಿಗಾವ್ಯಾಟ್ ಸಾಮರ್ಥ್ಯದ ಘಟಕ ಆರಂಭಿಸಿದ್ದೇವೆ. ಪ್ರಸಕ್ತ ಹಣಕಾಸು ವರ್ಷದಲ್ಲೇ 4 ಗಿಗವ್ಯಾಟ್ ಸಾಮರ್ಥ್ಯ ಸಿಗಲಿದೆ. ನಂತರದಲ್ಲಿ ಪ್ರತಿ ವರ್ಷ 5 ಗಿಗಾವ್ಯಾಟ್ ವಿದ್ಯುತ್ ಉತ್ಪಾದನಾ ಸಮರ್ಥ್ಯ ಸೇರ್ಪಡೆಯಾಗಲಿದೆ ಎಂದಿದ್ದಾರೆ.


ಅದಾನಿ ನ್ಯೂ ಇಂಡಸ್ಟ್ರೀಸ್ ಕಂಪನಿಯು ಸೌರಫಲಕ ಹಾಗೂ ಪವನ ಯಂತ್ರಗಳ ಉತ್ಪಾದನೆಗಾಗಿ ಗುಜರಾತ್‌ನ ಮುಂದ್ರದಲ್ಲಿ 30 ಸಾವಿರ ಕೋಟಿ ರೂ.ಗಳ ಹೂಡಿಕೆ ಮಾಡಲಿದೆ.

ಕಂಪನಿ ಪ್ರಸಕ್ತ ಮುಂದ್ರದಲ್ಲಿ 4 ಗಿಗಾವ್ಯಾಟ್ ವಿದ್ಯುತ್ ಉತ್ಪಾದಿಸುತ್ತಿದೆ. ಈ ಸಾಮರ್ಥ್ಯವನ್ನು 2026-27ರ ವೇಳೆಗೆ 10 ಗಿಗಾವ್ಯಾಟ್‌ಗೆ ಹೆಚ್ಚಿಸುವ ಗುರಿ ಇದೆ ಎಂದು ಜೈನ್ ತಿಳಿಸಿದ್ದಾರೆ. ಜೈನ್ ಅವರು ಈ ಕಂಪನಿಯ ಮಂಡಳಿಯಲ್ಲಿ ನಿರ್ದೇಶಕರಾಗಿದ್ದಾರೆ.

2030ರ ವೇಳೆಗೆ ನವೀಕರಣ ಇಂಧನದ ಮೂಲಕ 500 ಗಿಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಭಾರತ ಗುರಿ ಹೊಂದಿದೆ. ಈ ದಿಸೆಯಲ್ಲಿ ಅದಾನಿ ಸಮೂಹ ಅತಿ ಹೆಚ್ಚಿನ ಹೂಡಿಕೆ ಮಾಡುತ್ತಿದೆ.

ಗುಜಾರತ್‌ನ ಖಾವ್ಡಾ 538 ಚದುರ ಕಿ.ಮೀ. ಪ್ರದೇಶದಲ್ಲಿ ಹರಡಿದೆ. ಇದು ಪ್ಯಾರಿಸ್ ನಗರ ಪ್ರದೇಶಕ್ಕಿಂತ ಐದು ಪಟ್ಟು ದೊಡ್ಡದಾಗಿದೆ. ಈ ಪ್ರದೇಶದಲ್ಲಿ 81 ಶತಕೋಟಿ ಯುನಿಟ್ ವಿದ್ಯುತ್ ಉತ್ಪಾದಿಸುವ ಗುರಿ ಇದೆ. ಇದು ಬೆಲ್ಜಿಯಂ, ಚಿಲಿ ಹಾಗೂ ಸ್ವಿಟ್ಜರ್‌ಲ್ಯಾಂಡ್ ರೀತಿಯ ದೇಶಗಳು ಬಳಸುವಷ್ಟು ವಿದ್ಯುತ್ ಆಗಿದೆ. ರಾಜಸ್ಥಾನ ಹಾಗೂ ತಮಿಳುನಾಡುಗಳಲ್ಲೂ ಅದಾನಿ ಗ್ರೀನ್ ಎನರ್ಜಿ ಹೂಡಿಕೆ ಮಾಡಿದೆ.

# ಚುನಾವಣೆ ನಿರ್ಧರಿಸುವಾಗ, ಪರಿಸರ ಹವಾಮಾನ ಪರಿಸ್ಥಿತಿ ಪರಿಗಣಿಸಿ



ನವದೆಹಲಿ, ಏ. 7 - ಲೋಕಸಭೆ ಹಾಗೂ ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸುವ ಕುರಿತು ನಿರ್ಧಾರ ತೆಗೆದುಕೊಳ್ಳುವಾಗ ಹವಾಮಾನ ಹಾಗೂ ಪರಿಸರ ಪರಿಸ್ಥಿತಿಯನ್ನೂ ಪರಿಗಣಿಸಬೇಕು ಎಂದು ಹವಾಮಾನ ಇಲಾಖೆಯ ಮುಖ್ಯಸ್ಥ ಮೃತ್ಯುಂಜಯ ಮೊಹಾಪಾತ್ರ ಹೇಳಿದ್ದಾರೆ.

ಸಾರ್ವತ್ರಿಕ ಚುನಾವಣೆಯ ಸಂದರ್ಭದಲ್ಲಿ ಭಾರತ ತೀವ್ರ ತಾಪಮಾನದ ಪರಿಸ್ಥಿತಿ ಎದುರಿಸುತ್ತದೆ. ಅಧಿಕಾರಿಗಳು ಉತ್ತಮ ಸಿದ್ಧತೆ ಮಾಡಿಕೊಳ್ಳಲು ಹವಾಮಾನ ಇಲಾಖೆ ವಿಶೇಷ ಮುನ್ನೆಚ್ಚರಿಕೆ ನೀಡುತ್ತಿದೆ. ಆದರೆ, ಸಾರ್ವಜನಿಕ ಸಮಾವೇಶ ಹಾಗೂ ಮತದಾನದ ಸಮಯ ಬದಲಾವಣೆಯ ಪ್ರಸ್ತಾಪ ಕಳಿಸಿಲ್ಲ ಎಂದು ಮೊಹಾಪಾತ್ರ ಹೇಳಿದ್ದಾರೆ. ಒಂದು ದೇಶ, ಒಂದು ಚುನಾವಣೆ ಪರಿಕಲ್ಪನೆ ರೂಪಿಸುವ ವೇಳೆಗೆ ಹವಾಮಾನ ಪರಿಸ್ಥಿತಿಯನ್ನೂ ಪರಿಗಣಿಸಬೇಕು ಎಂದವರು ಸಲಹೆ ನೀಡಿದ್ದಾರೆ. ಕಡು ಬಿಸಿಲಿರುವ ಕಾರಣದಿಂದಾಗಿ ಸಮಾವೇಶ ಹಾಗೂ ಮತದಾನದ ವೇಳೆ ಕುಡಿಯುವ ನೀರು, ನೆರಳು ಹಾಗೂ ಬಿಸಿಲ ಬಗ್ಗೆ ಕಾಳಜಿ ವಹಿಸುವ ಬಗ್ಗೆ ವ್ಯವಸ್ಥೆ ಮಾಡಬೇಕಾಗುತ್ತದೆ ಎಂದವರು ತಿಳಿಸಿದ್ದಾರೆ.

ಜನರು ಸರದಿಯಲ್ಲಿ ಕಾಯುವಾಗ ಅವರಿಗೆ ಸಮರ್ಪಕ ಪ್ರಮಾಣದ ನೀರು ಲಭ್ಯವಿರಬೇಕು. ಬಿಸಿಲಿನ ಆಘಾತಕ್ಕೆ ಸಿಲುಕಿ ಕುಸಿಯುವ ಜನರಿಗೆ ನೆರವಾಗಲು ಆರೋಗ್ಯ ಸಿಬ್ಬಂದಿ ಹಾಗೂ ಪ್ರಥಮ ಚಿಕಿತ್ಸಾ ಸೌಲಭ್ಯ ಇರಬೇಕು. ಇದು ಕನಿಷ್ಠ ಅಗತ್ಯವಾಗಿದೆ ಎಂದು ಮೊಹಾಪಾತ್ರ ಹೇಳಿದ್ದಾರೆ.

ಚುನಾವಣಾ ವೇಳಾಪಟ್ಟಿ ನಿರ್ಧರಿಸುವಾಗ ಚುನಾವಣಾ ಆಯೋಗ ಹವಾಮಾನ ಇಲಾಖೆಯನ್ನು ಸಂಪರ್ಕಿಸಿತ್ತು. ನಾವು ಮಾರ್ಚ್, ಏಪ್ರಿಲ್, ಮೇ ಹಾಗೂ ಜೂನ್ ತಿಂಗಳ ಹವಾಮಾನ ಮಾಹಿತಿ ನೀಡಿದ್ದೆವು ಎಂದವರು ಹೇಳಿದ್ದಾರೆ. ನಾವು ಎಲ್ಲಾ ರೀತಿಯ ಮುನ್ನೆಚ್ಚರಿಕೆಯನ್ನು ಪ್ರತಿದಿನ, ವಾರ, ತಿಂಗಳು ಹಾಗೂ ಋತುಮಾನಕ್ಕೆ ಅನುಗುಣವಾಗಿ ನೀಡುತ್ತಿದ್ದೇವೆ ಎಂದವರು ಹೇಳಿದ್ದಾರೆ.

ಏಪ್ರಿಲ್ - ಜೂನ್ ಅವಧಿಯಲ್ಲಿ ದೇಶಾದ್ಯಂತ ಬಿಸಿಲಿನ ತೀವ್ರತೆ ಹೆಚ್ಚಾಗಿರಲಿದೆ. ಮಧ್ಯ ಹಾಗೂ ಪಶ್ಚಿಮ ಭಾಗದಲ್ಲಿ ತಾಪಮಾನ ಇನ್ನಷ್ಟು ಹೆಚ್ಚಾಗಿರಲಿದೆ. ಮಧ್ಯ ಪ್ರದೇಶ, ಗುಜರಾತ್, ಒಡಿಶಾ, ಆಂಧ್ರ ಪ್ರದೇಶ, ಮಧ್ಯ ಮಹಾರಾಷ್ಟ್ರ, ವಿದರ್ಭ, ಮರಾಠವಾಡ, ಬಿಹಾರ ಹಾಗೂ ಜಾರ್ಖಂಡ್‌ಗಳಲ್ಲಿ ಬಿಸಿಗಾಳಿ ಇರಲಿದೆ. ಕೆಲ ಪ್ರದೇಶಗಳಲ್ಲಿ 20 ದಿನಗಳಿಗೂ ಹೆಚ್ಚು ಕಾಲ ಬಿಸಿಗಾಳಿ ಕಂಡು ಬರಲಿದೆ ಎಂದು ಮೊಹಾಪಾತ್ರ ಹೇಳಿದ್ದಾರೆ. ಸಾರ್ವಜನಿಕ ಸಮಾವೇಶ ಹಾಗೂ ಮತದಾನದ ಸಮಯ ಬದಲಿಸುವ ಬಗ್ಗೆ ನಾವು ಯಾವುದೇ ಸಲಹೆ ನೀಡಿಲ್ಲ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ನಿರ್ಧರಿಸಬೇಕು. ಆದರೆ, ಅಗತ್ಯ ವ್ಯವಸ್ಥೆ ಕಲ್ಪಿಸುವ ಬಗ್ಗೆ ಎನ್.ಡಿ. ಎಂ.ಎ. ಸಾಮಾನ್ಯ ಮಾರ್ಗಸೂಚಿ ಪ್ರಕಟಿಸಿದೆ ಎಂದು ಮೊಹಾಪಾತ್ರ ಹೇಳಿದ್ದಾರೆ.

## ಕೋಡಿ ಕ್ಯಾಂಪ್ ಕೊಟ್ಟೂರೇಶ್ವರ ಸ್ವಾಮಿ ಮಠದಲ್ಲಿ ಇಂದು ಯುಗಾದಿ ಅಮಾವಾಸ್ಯೆ



ಕೊಟ್ಟೂರು ಶ್ರೀ ಗುರುಬಸವರಾಜೇಂದ್ರ ಸ್ವಾಮಿ ಪಾದಯಾತ್ರೆ ಟ್ರಸ್ಟ್ (ದಾವಣಗೆರೆ) ಇವರಿಂದ ಮಾಗಾನಹಳ್ಳಿ ಕೋಡಿ ಕ್ಯಾಂಪ್ ಬಳಿ ಇರುವ ಶ್ರೀ ಗುರು ಕೊಟ್ಟೂರೇಶ್ವರ ಮಹಾಸ್ವಾಮಿ ಪಾದಗಳಿಗೆ ಯುಗಾದಿ ಅಮಾವಾಸ್ಯೆ ಪ್ರಯುಕ್ತ ಇಂದು ಬೆಳಿಗ್ಗೆ 6.30ಕ್ಕೆ ಅಭಿಷೇಕ, ವಿಶೇಷ ಪೂಜೆ ನಡೆಯಲಿದೆ. ನಂತರ ಬೆಳಿಗ್ಗೆ 8 ರಿಂದ ಪ್ರಸಾದ ದಾಸೋಹ ಏರ್ಪಡಿಸಲಾಗಿದೆ.

ನಂದಿ ಪೆಟ್ರೋಲ್ ಬಂಕ್ ಮಾಲೀಕ ಟಿ.ಎಸ್. ಜಯರುದ್ರೇಶ್ ಅವರು ಪ್ರಸಾದದ ಸೇವಾಕರ್ತರಾಗಿದ್ದಾರೆ.

ವಿವರಕ್ಕೆ ಕಣಕುಪ್ಪಿ ಮುರುಗೇಶಪ್ಪ (96118 89151), ಟಿ.ಜಿ. ಬಕ್ಕೇಶಪ್ಪ (91089 888898) ಬಿ.ಚಿದಾನಂದಪ್ಪ (98455 28449), ಮಲ್ಲಾಬಾದಿ ಗುರು ಬಸವರಾಜ್ (79757 97079) ತಿಳಿಸಿದ್ದಾರೆ.

ದಾಸೋಹ ಮನೆ ಮತ್ತು ಸಭಾಂಗಣ ಕಟ್ಟಡವು ಪ್ರಗತಿ ಹಂತದಲ್ಲಿದೆ. ಭಕ್ತಾದಿಗಳು ದೇಣಿಗೆ ಸಲ್ಲಿಸಬಹುದು.


**ಜೈ ಶ್ರೀಮನ್ನಾರಾಯಣ**
ವಿಕಾಸ ತರಂಗಿಣಿ, ದಾವಣಗೆರೆ
29ನೇ ವರ್ಷದ
**ಉಚಿತ ಮಜ್ಜಿಗೆ ವಿತರಣೆ ಕಾರ್ಯಕ್ರಮ**
ಮಾರ್ಚ್ 23 ರಿಂದ 2 ತಿಂಗಳ ಕಾಲ.
ಇಂದಿನ ಮಜ್ಜಿಗೆ ಪ್ರಾಯೋಜಕರು :-
ದಿ. ಶಾಂತಮ್ಮನವರ ಜ್ಞಾಪಕಾರ್ಥವಾಗಿ ಆರ್.ಆರ್. ರಮೇಶ್ ಬಾಬು ಮತ್ತು ಕುಟುಂಬದವರು ಹಾಗೂ ರಾಜನಹಳ್ಳಿ ರಾಧಾಕೃಷ್ಣ ಗುಪ್ತ ಜ್ಯೂಯಲರ್ಸ್, ವಿಜಯಲಕ್ಷ್ಮಿ ರಸ್ತೆ, ದಾವಣಗೆರೆ.
ಸ್ಥಳ : ಮಹಾನಗರ ಪಾಲಿಕೆ ಆವರಣ

**ಸೈಟುಗಳು ಮಾರಾಟಕ್ಕಿದೆ**
ವಾಜಪೇಯಿ ಲೇಔಟ್ ಪಕ್ಕ ಗೀತಂ ಕಾಲೇಜು ಸುತ್ತ-ಮುತ್ತ ಹೊಸ ಬಡಾವಣೆಗಳಲ್ಲಿ 30x35 ಉತ್ತರ-ಪಶ್ಚಿಮ ಕಾರ್ನರ್, 60 ಅಡಿ ರಸ್ತೆಗೆ ಹೊಂದಿಕೊಂಡು 28x30 ಪಶ್ಚಿಮ ಅಕ್ಕ-ಪಕ್ಕ 30x40 ಪೂರ್ವ, 30x40 ದಕ್ಷಿಣ
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**ಮನೆ ಕ್ಲೀನಿಂಗ್ ಮಾಡಿಕೊಡಲಾಗುವುದು**
ಮನೆ ಕ್ಲೀನಿಂಗ್ ಮತ್ತು ಹಳೆಮನೆ ಬಾಡಿಗೆ ಕೊಡುವ ಮನೆಗಳನ್ನು ಕ್ಲೀನಿಂಗ್ ಮಾಡಿಕೊಡಲಾಗುವುದು. ಹಾಗೂ ಬಾತ್ ರೂಂ ಆಸಿಡ್ ವಾಶ್ ಮಾಡಿಕೊಡಲಾಗುವುದು.
99863 61250, 80730 24690

**ಶ್ರೇಯಸ್ ಉದರ, ಲಿವರ್, ಕರುಳು ರೋಗಗಳ ಚಿಕಿತ್ಸಾ ಕೇಂದ್ರ**
**ಡಾ. ಇ.ಆರ್. ಸಿದ್ದೇಶಿ**
M.D. (MED), D.M. (Gastro), F.A.C.G. (USA), P.G.C.C. Diab. Care (Aust)
ಉದರ, ಲಿವರ್, ಕರುಳು, ಪ್ಯಾನ್‌ಕ್ರಿಯಾಸ್, ಎಂಡೋಸ್ಕೋಪಿ, ಸಕ್ಕರೆ ಕಾಯಿಲೆ ತಜ್ಞರು
8th Main, 8th Cross, P.J. Extension, Davangere.
ಭೇಟಿಯ ಸಮಯ : ಬೆ. 9 ರಿಂದ ಮಧ್ಯಾಹ್ನ 3 ಹಾಗೂ ಸಂಜೆ 7.30 ರಿಂದ 8.30
By Appointment only.
94837 23166

**ಸೈಟುಗಳು ಮಾರಾಟಕ್ಕಿವೆ**
ಹೊಸ ಕುಂದವಾಡ ಹತ್ತಿರ, ಸುಶಿ ಕನ್ವೆನ್ಷನ್ ಹಾಲ್ ಹಿಂಭಾಗ ಹೊಸ ಬಡಾವಣೆಗಳಲ್ಲಿ 30x40 ಪಶ್ಚಿಮ, 30x50 ಉತ್ತರ, 30x40 ಪಶ್ಚಿಮ ಅಕ್ಕ-ಪಕ್ಕ 30x50 ಪೂರ್ವ.
ಸ್ವಾಮಿ ಏಜೆಂಟ್, ವಿದ್ಯಾನಗರ
97421 44715

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ.
ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
91132 85992

**ಸ್ಪೋಕನ್ ಇಂಗ್ಲಿಷ್**
100% ಅತ್ಯುತ್ತಮ ಫಲಿತಾಂಶ
ಟ್ಯೂಷನ್ ಕನ್ನಡ, ಹಿಂದಿ, ವೇದಿಕ್ ಮ್ಯಾಥ್ಸ್, ಹ್ಯಾಂಡ್‌ರೈಟಿಂಗ್
ಮಿರಜ್‌ಕರ್ ಟ್ಯುಟೋರಿಯಲ್
ಮೊ. : 90369 96243

**ಪ್ರಾಪರ್ಟಿ ಹಬ್**
ಇ ಸಿ
ಇ - ಸ್ವತ್ತು
ಕಟ್ಟಡ ಲೈಸೆನ್ಸ್
ಖಾತೆ ಬದಲಾವಣೆ
96118 66449

**ಮನೆ ಬಾಡಿಗೆಗಿದೆ**
1ನೇ ಮಹಡಿಯಲ್ಲಿ, 3 ಬೆಡ್ ರೂಂ ಮನೆ ಪೂರ್ವಮುಖ ಬಾಗಿಲು, 13ನೇ ಕ್ರಾಸ್, ಆಂಜನೇಯ ಬಡಾವಣೆಯಲ್ಲಿ ಮನೆ ಬಾಡಿಗೆಗೆ ಇದೆ. ಬೋರ್ / ಮುನ್ಸಿಪಲ್ ಸೌಕರ್ಯ ಲಭ್ಯವಿದೆ.
(ಸಸ್ಯಹಾರಿಗಳಿಗೆ ಮಾತ್ರ)
9986158141, 9448872781

**ಬೇಕಾಗಿದ್ದಾರೆ**
ಬೂಸ್ಟ್ ಉತ್ಪನ್ನವನ್ನು ಪ್ರಮೋಟ್ ಮಾಡುವ ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ. ಸಂಪರ್ಕಿಸಿ :
70192 72603

**ಬಾಂಧವ್ಯ ಹೋಮ್ ನರ್ಸಿಂಗ್ ಸರ್ವೀಸ್**
ವಯೋವೃದ್ಧರು, ಬೆಡ್ ರಿಡನ್ ಪೇಷೆಂಟ್‌ಗಳಿಗೆ ಬೆಳಿಗ್ಗೆ ಮತ್ತು ಸಂಜೆ ಬಂದು ಡೈಪರ್ ಚೇಂಜ್ ಮಾಡುವುದು. ಸ್ಪಾಂಜ್ ಬಾತ್ (ಸ್ನಾನ) ಮಾಡಿಸುತ್ತೇವೆ.
85508 36642

ಶ್ರೀ ದುಗ್ಗಮ್ಮದೇವಿ ಪ್ರಸನ್ನ
**ಟಗರು ಮಾರಾಟಕ್ಕಿದೆ**
ನೇರ ರೈತರಿಂದ ಮಾರಾಟ 2 ಹಲ್ಲು, 4 ಹಲ್ಲಿನ ಟಗರುಗಳು ಸಿಗುತ್ತವೆ. ಯಾವುದೇ ಮಧ್ಯವರ್ತಿಗಳಿಗೆ ಅವಕಾಶವಿಲ್ಲ. ಸಂಪರ್ಕಿಸಿ.
80883 67539, 97390 63544

**ಬೇಕಾಗಿದ್ದಾರೆ**
ಪತ್ರಿಕಾ ಕಾರ್ಯಾಲಯದಲ್ಲಿ ಸಂಜೆ ಪಾಳೆಯದಲ್ಲಿ ಕೆಲಸ ಮಾಡಲು ಕನ್ನಡ ಭಾಷಾ ಜ್ಞಾನ ಹಾಗೂ ಕನ್ನಡ ಟೈಪಿಂಗ್ ಬಲ್ಲ ಕಂಪ್ಯೂಟರ್ ಆಪರೇಟರ್ ಹುದ್ದೆಗೆ ಬೇಕಾಗಿದ್ದಾರೆ.
ಸಂಪರ್ಕಿಸುವ ಸಮಯ : ಮಧ್ಯಾಹ್ನ 12ರ ನಂತರ
ಫೋ. : 08192 254736

**ಹೋಂ ನರ್ಸಿಂಗ್ ಸರ್ವೀಸ್**
ಹೆಲ್ತ್‌ಕೇರ್ ಮಹಿಳೆಯರು / ಪುರುಷರಿಗೆ ಸ್ನಾನ, ಡೈಪರ್ ಚೇಂಜ್, ವಾಕ್ 1/2 ಗಂಟೆ 1,2 ಗಂಟೆ ಕೆಲಸಕ್ಕೆ ಬೇಕಾಗಿದ್ದಾರೆ. ಬೆಳಿಗ್ಗೆ 9 ರಿಂದ ಸಂಜೆ 6 ರವರೆಗೆ ಕೆಲಸಕ್ಕೆ ಸಿಗುತ್ತಾರೆ. ಬೇಕಾದವರು ಕರೆ ಮಾಡಿ. ವಯಸ್ಸಾದ ಜೆಂಟ್ಸ್, ಲೇಡಿಸ್ ಇವರಿಗೆ ಬೇಕಾದರೆ ಕರೆ ಮಾಡಿ. ಕೆಲಸಕ್ಕೆ ಬೇಕಾದರೆ ಈ ನಂಬರಿಗೆ ಕರೆ ಮಾಡಿ.
ಶಿಲ್ಪಾ : 91644 93271

**SSLC SUMMER CLASS**
From April 10th to May 28th
10 AM to 5 PM Classes
SAMRUDDHI ACADEMY DAVANAGERE
81472 62361, 96202 62361

**ಪ್ರವೇಶ ಪ್ರಕಟಣೆ**
ಡಿಪ್ಲೋಮಾ ಇನ್ ಪೇಷೆಂಟ್ ಕೇರ್ ನರ್ಸಿಂಗ್ - 2 ವರ್ಷ
ವಿದ್ಯಾರ್ಹತೆ: PUC ಪಾಸ್/ಫೇಲ್, SSLC PASS
ತರಬೇತಿ ನಂತರ ಖಾಸಗಿ ಆಸ್ಪತ್ರೆ, ನರ್ಸಿಂಗ್ ಹೋಂಗಳಲ್ಲಿ ನರ್ಸ್‌ಗಳಾಗಿ ಕೆಲಸ ಮಾಡಬಹುದು.
ಮಾನಸ ಕಮ್ಯೂನಿಟಿ ಕಾಲೇಜ್ (ರಿ)
LK ಕಾಂಪ್ಲೆಕ್ಸ್, 1ನೇ ಮಹಡಿ, ಅಶೋಕ ರಸ್ತೆ, 1ನೇ ಕ್ರಾಸ್, ಅಹಾರ್ 2000 ಹಿಂಭಾಗ ರಸ್ತೆ, ದಾವಣಗೆರೆ-577002.
97402 58276

**WANTED TEACHERS**
Play Group, LKG, UKG with Good English Fluency and 2 Years Experience in Montesori
83100 69167

**ಡ್ರೈವರ್, ಕಂಡಕ್ಟರ್ ಬೇಕಾಗಿದ್ದಾರೆ**
ನಗರ ಸಾರಿಗೆ ಬಸ್ಸಿಗೆ ಡ್ರೈವರ್ (ಪುರುಷ) ಮತ್ತು ಕಂಡಕ್ಟರ್ (ಪುರುಷ ಅಥವಾ ಮಹಿಳಾ) ಬೇಕಾಗಿದ್ದಾರೆ. ಸಂಪರ್ಕಿಸಿ :
91642 22937

**SUPER COMPUTER CLASS**
Personal Training For Computer Teaching Basic Computer, Tally, Advanced Excell For Students And Business Man 2Nd Main, 1St Cross, Vinobanagara, Davanagere.
79750 49109, 70194 69635

**TUITIONS**
IGCSE, ICSE, CBSE and State Board from class 5th to 12th MCC A Block
98444 92888

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ - ವಸ್ತು ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

**ಕ್ಲಬ್‌ನಲ್ಲಿ ಕೆಲಸ ಮಾಡಲು ಸಪ್ಲೈಯರ್ಸ್ ಮತ್ತು ಕ್ಲೀನರ್ಸ್ ಬೇಕಾಗಿದ್ದಾರೆ**
ದಾವಣಗೆರೆ ಕ್ರೀಡಾ ಮತ್ತು ಮನೋರಂಜನಾ ಕೇಂದ್ರ, ವಿದ್ಯಾನಗರ, ವಿನಾಯಕ ಬಡಾವಣೆ, 3ನೇ ಕ್ರಾಸ್, ದಾವಣಗೆರೆ.
98801 07630

**ಶಿಕ್ಷಕ / ಶಿಕ್ಷಕಿಯರು ಬೇಕಾಗಿದ್ದಾರೆ**
D.Ed, Eng - 2, Maths - 2, Science - 2, Hindi - 2, M.Sc / B.Ed, Science - 2, Maths - 2, Hindi, MA / B.Ed - 2, B.Sc - 2, MA / B.Ed - 2.
ಸಂಪರ್ಕಿಸಿ : SMS ಕಾನ್ವೆಂಟ್, ರಾಜೀವ್ ಗಾಂಧಿ ಬಡಾವಣೆ, RTO ಕಚೇರಿ ಹತ್ತಿರ, ದಾವಣಗೆರೆ.
98447 35946, 96631 95531

**ಕೆಲಸಕ್ಕೆ ಬೇಕಾಗಿದ್ದಾರೆ**
ಶ್ರೀ ಸಾಯಿ ಫೈನಾನ್ಸ್ (ರಿ.)
ಆಫೀಸ್ ಕೆಲಸಕ್ಕೆ ಹುಡುಗಿಯರು & ಹುಡುಗರು ಬೇಕಾಗಿದ್ದಾರೆ.
ಶಿವಪ್ಪಯ್ಯ ಸರ್ಕಲ್, ದಾವಣಗೆರೆ.
96860 22969

**ಲೈಂಗಿಕ ನಿಶ್ಯಕ್ತಿಗೆ ನಿರಾಶರಾಗಬೇಡಿ**

ಶೀಘ್ರ ಸ್ಖಲನ, ಹಸ್ತ ಮೈಥುನ, ಸ್ವಪ್ನದೋಷ, ನರಗಳ ದೌರ್ಬಲ್ಯತೆ, ತಾರುಣ್ಯ ನಾಶ, ಸಂತಾನ ದೋಷ, ಲೈಂಗಿಕ ಸಮಸ್ಯೆಗೆ ಭೇಟಿಯಾಗಿ.
ದಾವಣಗೆರೆ : 2 & 3 ರಂದು
ಬಸವರಾಜ ಲಾಡ್ಜ್ ಪಿ.ಬಿ. ರಸ್ತೆ.
ಡಾ|| ಎಚ್.ಆಯ್. ದೊಡ್ಡಮನಿ (G.R.No.8969)
ಡಮ್ಮಣಗಿ ಕಾಂಪ್ಲೆಕ್ಸ್, 1ನೇ ಮಹಡಿ, ನಂ.26 ಹಳೇಬಸ್ ಸ್ಟ್ಯಾಂಡ್ ಎದುರಿಗೆ, ಹುಬ್ಬಳ್ಳಿ
M:9740523710

**WANTED LADY RECEPTIONIST for clinic**
Qualification : Degree
Age limit : 25 years
Timings : 12.00 to 2.30 pm, 6.30 to 8.00 pm
9743318128, 9448113106

ಶ್ರೀ ರಾಘವೇಂದ್ರ ಜ್ಯೋತಿಷ್ಯಾಲಯ
**Famous Astrologer**
No. 1 ವಶೀಕರಣ ಸ್ಪೇಷಲಿಸ್ಟ್
ನೀವು ಇಷ್ಟಪಟ್ಟವರು ನಿಮ್ಮಂತಾಗಲು, ಮದುವೆ ವಿಳಂಬ, ದಾಂಪತ್ಯ ಸ್ತ್ರೀ-ಪುರುಷ ವಶೀಕರಣ, ನಿಮ್ಮ ಯಾವುದೇ ಸಮಸ್ಯೆಗಳನ್ನು 100% ಪರಿಹಾರ ಶತಃ ಸಿದ್ಧ.
ಜಿ. ವಿ. ಭಟ್ಟರ್
ಶಿವಕುಮಾರಸ್ವಾಮಿ ಬಡಾವಣೆ, ದಾವಣಗೆರೆ
89716 99826

**HIRING IMMEDIATELY**
Sales Executives and Manager post with minimum 1 year experience in any Industy
90600 00643


## ದೊಡ್ಡಬಾತಿಯ ಉಪ್ಪಾರ ಸಿದ್ದಮ್ಮ ನಿಧನ



ದಾವಣಗೆರೆ ತಾ. ದೊಡ್ಡಬಾತಿಯ ಗ್ರಾಮದ ಉಪ್ಪಾರ ಸಿದ್ದಪ್ಪನವರ ಧರ್ಮಪತ್ನಿ **ಶ್ರೀಮತಿ ಉಪ್ಪಾರ ಸಿದ್ದಮ್ಮ** ಅವರು ದಿನಾಂಕ 07-04-2024ರ ಭಾನುವಾರ ರಾತ್ರಿ 11.20ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 62 ವರ್ಷ ವಯಸ್ಸಾಗಿತ್ತು. ಪತಿ, ಮೂವರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 08.04.2024ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ದೊಡ್ಡಬಾತಿಯ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು.

ಇಂತಿ ದುಃಖತಪ್ತ ಕುಟುಂಬ ವರ್ಗ, ಮೊ : 96631-47735

## ಎ.ಪಿ. ಮಂಜುನಾಥ್ ನಿಧನ



ದಾವಣಗೆರೆ ಪಿ.ಜೆ. ಬಡಾವಣೆ ವಾಸಿ ಎ.ಪಿ. ಮಂಜುನಾಥ್ (73) ಇವರು ದಿನಾಂಕ 7.4.2024ರ ಭಾನುವಾರ ರಾತ್ರಿ 11.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಪಾರ್ಥಿವ ಶರೀರವನ್ನು ದಿನಾಂಕ 08.04.2024ರ ಸೋಮವಾರ ಬೆಳಿಗ್ಗೆ 7 ಗಂಟೆಯವರೆಗೆ ಮೃತರ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕೆ ಇಡಲಾಗುವುದು. ನಂತರ ನಗರದ ಜೆಜೆಎಂ ಮೆಡಿಕಲ್ ಕಾಲೇಜಿಗೆ ದೇಹವನ್ನು ಹಸ್ತಾಂತರಿಸಲಾಗುವುದು.

ದುಃಖತಪ್ತ ಕುಟುಂಬ ವರ್ಗ : 98440 51909, 99800 55227

## ಕೈಗಾರಿಕಾ ಕ್ಷೇತ್ರಗಳ ಅಭಿವೃದ್ದಿಗೆ ಆದ್ಯತೆ

**(1ನೇ ಪುಟದಿಂದ)** ನನ್ನ ಮೇಲಿರಲಿ ಎಂದು ಮನವಿಮಾಡಿದರು.

ಶಾಸಕ ಬಿ.ದೇವೇಂದ್ರಪ್ಪ ಮಾತನಾಡಿ, ನಿರಂತರ ವಾಗಿ ಆರೋಗ್ಯ ಸೇವೆಯಲ್ಲಿ ತೊಡಗಿಕೊಂಡಿರುವ ಕ್ಷೇತ್ರದ ಅಭಿವೃದ್ಧಿಯ ಸಂಕಲ್ಪಹೊಂದಿರುವ ದಾವಣಗೆರೆ ಕ್ಷೇತ್ರದ ಮನೆಮಗಳು ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ವಿಧಾನ ಸಭಾ ಕ್ಷೇತ್ರದಿಂದ ವ್ಯಾಪಕ ಬೆಂಬಲವ್ಯಕ್ತವಾಗುತ್ತಿದೆ.ಈ ಬಾರಿ ಸಂಸದರಾಗಿ ದೆಹಲಿ ಸಂಸತ್ತಿಗೆ ಹೋಗುವುದು ನಿಶ್ಚಿತ ವಿಶ್ವಾಸ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳ ಕುರಿತು ಪಕ್ಷದ ಕಾರ್ಯಕರ್ತರು ಪ್ರತಿಕುಟುಂಬದ ಮತದಾರರಿಗೆ ಜಾಗೃತಿ ಮೂಡಿಸಿ ಪ್ರತಿ ಬೂತ್ ಮಟ್ಟದಿಂದ ಅಧಿಕ ಮತಗಳಿಂದ ಗೆಲ್ಲಿಸಬೇಕು ಎಂದು ಕರೆ ನೀಡಿದರು.

ತಾಲ್ಲೂಕಿನ ಹಳ್ಳಿಗಳಲ್ಲಿ ಪರಿಶಿಷ್ಟ ಸಮುದಾಯಗಳು ಹೆಚ್ಚಾಗಿ ವಾಸವಾಗಿದ್ದು. 100 ಕೋಟಿ ವೆಚ್ಚದ ಏಕಲವ್ಯ ವಸತಿ ಶಾಲೆಗೆ ಸ್ಥಳ ಗುರುತಿಸಿದ್ದು.ಪ್ರಸ್ತಾವನೆ ಸಲ್ಲಿಸಲಾಗಿದೆ. ಇದರಿಂದ ಬಡಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿದೆ. ಡಾ.ಪ್ರಭಾ ಮಲ್ಲಿಕಾರ್ಜುನ್ ಅವರು ಸಂಸದರಾಗಿ ಆಯ್ಕೆಯಾದರೆ ಕೇಂದ್ರ ಸರ್ಕಾರದಿಂದ ಶೀಘ್ರವಾಗಿ ಅನುಮೋದನೆ ದೊರೆಯಲಿದೆ ಎಂದರು. ಜೆಸಿಬಿ ಯಂತ್ರದಿಂದ ಸೇಬುಹಣ್ಣಿನ ಹಾರ ಮಾಲಾರ್ಪಣೆ, ಪಟಾಕಿ ಸಿಡಿಸಿ ಕಾರ್ಯಕರ್ತರು ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಈ ಸಂದರ್ಭದಲ್ಲಿ ಬ್ರಾಹ್ಮಣ ಅಭಿವೃದ್ದಿ ನಿಗಮ ಅಧ್ಯಕ್ಷ ಅಸಗೋಡು ಜಯಸಿಂಹ, ಕೆಪಿಸಿಸಿ ಎಸ್.ಟಿ ಘಟಕದ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ, ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ.ಕೀರ್ತಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ಕೆಪಸಿಸಿ ಸದಸ್ಯ ಕಲ್ಲೇಶ್ ರಾಜ್ ಪಟೇಲ್, ಮುಖಂಡರಾದ ಶಿವಕುಮಾರ್ ಒಡೆಯರ್, ಸುಧೀರ್ ರೆಡ್ಡಿ, ಬಿ.ಮಹೇಶ್ವರಪ್ಪ, ತಿಪ್ಪೇಸ್ವಾಮಿಗೌಡ, ಯುಜಿ ಶಿವಕುಮಾರ್, ಬಸವಾಪುರ ರವಿಚಂದ್ರ, ಅಹಮ್ಮದ್ ಅಲಿ, ರಮೇಶ್, ಗಿರೀಶ್, ಮಹಮ್ಮದ್ ಗೌಸ್ ಪಲ್ಲಾಗಟ್ಟೆ ಶೇಖರಪ್ಪ ಮುಂತಾದವರು ಭಾಗವಹಿಸಿದ್ದರು.

## ಹೊರಾಂಗಣ ಕೆಲಸಕ್ಕೆ ಮಿತಿ

**(1ನೇ ಪುಟದಿಂದ)** ಹೆಚ್ಚಾಗುವುದು ದುಡಿಯುವ ವರ್ಗದ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ವಿಶೇಷವಾಗಿ ಕೃಷಿ, ಅರಣ್ಯ ಹಾಗೂ ಮೀನುಗಾರಿಕೆ ಅವಲಂಬಿಸುವವರ ಮೇಲೆ ಹೆಚ್ಚಿನ ಪರಿಣಾವಾಗುತ್ತದೆ ಎಂದು ಅಧ್ಯಯನಗಳು ತಿಳಿಸಿವೆ.

ತಮಿಳುನಾಡಿನಲ್ಲಿ ಕಳೆದ ವರ್ಷ ನಡೆಸಲಾದ ಅಧ್ಯಯನದ ಪ್ರಕಾರ, ತೀವ್ರ ತಾಪಮಾನದಿಂದ ಗರ್ಭಪಾತದ ಅಪಾಯ ಎರಡು ಪಟ್ಟು ಹೆಚ್ಚಾಗುತ್ತದೆ. ತಾಪಮಾನ ಹೆಚ್ಚಾದಷ್ಟು ಗರ್ಭಿಣಿಯರು ಹಾಗೂ ನವಜಾತ ಶಿಶುಗಳ ಮೇಲೆ ಪರಿಣಾಮವಾಗುತ್ತದೆ.

ಶೌಚಾಲಯದ ಲಭ್ಯತೆ ಕಡಿಮೆ ಇರುವ ಕಾರಣದಿಂದ ಮಹಿಳೆಯರು ಊಟ ಹಾಗೂ ನೀರು ಕುಡಿಯುವುದು ಕಡಿಮೆ ಮಾಡುತ್ತಾರೆ. ಇದರಿಂದ ಅಪೌಷ್ಠಿಕತೆ ಹೆಚ್ಚಾಗುವ ಜೊತೆಗೆ, ಗರ್ಭಿಣಿಯರ ಮೇಲೂ ಪರಿಣಾಮವಾಗುತ್ತದೆ ಎಂದು ಚೆನ್ನೈನ ಶ್ರೀರಾಮಚಂದ್ರ ಇನ್‌ಸ್ಟಿಟ್ಯೂಟ್ ಆಫ್ ಹೈಯರ್ ಎಜುಕೇಷನ್‌ನ ಉಪನ್ಯಾಸಕಿ ವಿದ್ಯಾ ವೇಣುಗೋಪಾಲ್ ಹೇಳಿದ್ದಾರೆ.

800 ಗರ್ಭಿಣಿಯರ ಅಧ್ಯಯನ ಮಾಡಿ ವಿದ್ಯಾ ಈ ವರದಿ ರೂಪಿಸಿದ್ದಾರೆ. ಇವರಲ್ಲಿ ಶೇ.47ರಷ್ಟು ಮಹಿಳೆಯರು ಹೊರಂಗಾಣದಲ್ಲಿ ಕೆಲಸ ಮಾಡುತ್ತಿದ್ದರು.

ಹಾರ್ಮೋನ್‌ಗಳ ಕಾರಣದಿಂದಾಗಿ ಗರ್ಭಿಣಿಯರ ದೇಹದ ಆಂತರಿಕ ತಾಪಮಾನ ಹೆಚ್ಚಾಗುತ್ತದೆ. ತಾಪಮಾನ ಹೆಚ್ಚಾದಷ್ಟೂ ಗರ್ಭದ ಬೆಳವಣಿಗೆ ಕುಂಠಿತವಾಗುತ್ತದೆ ಎಂದು ವಿದ್ಯಾ ತಿಳಿಸಿದ್ದಾರೆ. ಹವಾಮಾನಕ್ಕೆ ಅನುಗುಣವಾಗಿ ಹೊರಾಂಗಣದ ಕಾರ್ಮಿಕರ ಕೆಲಸದ ಅವಧಿ ಬದಲಾಯಿಸಬೇಕು. ಇಲ್ಲವಾದರೆ ನಿರಂತರ ಸಮಸ್ಯೆ ತಪ್ಪದು ಎಂದು ಮಿಶ್ರ ಹೇಳಿದ್ದಾರೆ.

ಕಠಿಣ ಪರಿಸ್ಥಿತಿಯಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುವುದನ್ನು ತಪ್ಪಿಸಬೇಕು. ಅವರಿಗೆ ಕಡ್ಡಾಯ ಬಿಡುವು ನೀಡಬೇಕು. ಉದ್ಯೋಗಕ್ಕೆ ನೇಮಿಸಿಕೊಳ್ಳುವ ಸಂಸ್ಥೆಗಳಿಗೆ ಈ ಬಗ್ಗೆ ಸೂಚನೆ ನೀಡಬೇಕು ಎಂದು ಮಿಶ್ರ ತಿಳಿಸಿದ್ದಾರೆ.

## ಕಲಬುರಗಿಯಲ್ಲಿ 43.1 ಡಿಗ್ರಿ ತಾಪಮಾನ

**(1ನೇ ಪುಟದಿಂದ)** ಎಂದು ಇಲಾಖೆ ಹೇಳಿದೆ. ಬೆಳಗಾವಿ, ಬೀದರ್, ವಿಜಯಪುರ, ಬಾಗಲಕೋಟೆ, ಗದಗ, ಕಲಬುರಗಿ, ಹಾವೇರಿ, ಧಾರವಾಡ, ಕೊಪ್ಪಳ, ರಾಯಚೂರು, ಯಾದಗಿರಿ, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಮುಂದಿನ 24 ಗಂಟೆಗಳ ಕಾಲ ಬಿಸಿಗಾಳಿಯ ವಾತಾವರಣ ಇರಲಿದೆ ಎಂದು ಮುನ್ಸೂಚನೆಯಲ್ಲಿ ತಿಳಿಸಲಾಗಿದೆ. ತಲೆ ಮುಚ್ಚಿಕೊಳ್ಳದೇ ಮನೆಯಿಂದ ಹೊರ ಹೋಗಬಾರದು ಹಾಗೂ ಬಿಸಿಲ ಆಘಾತದಿಂದ ತಪ್ಪಿಸಿಕೊಳ್ಳಲು ಸಾಕಷ್ಟು ನೀರು ಕುಡಿಯಬೇಕು ಎಂದು ವೈದ್ಯರು ಸಲಹೆ ನೀಡಿದ್ದಾರೆ.

## ದಕ್ಷಿಣ, ಪೂರ್ವದಲ್ಲಿ ಬಿಜೆಪಿ ಮತಗಳಿಕೆ ಏರಿಕೆ

**(1ನೇ ಪುಟದಿಂದ)** ಮಾಡುತ್ತಿದ್ದಾರೆ. ಯಶಸ್ಸು ಹೇಗೆ ಸಿಗಲು ಸಾಧ್ಯ? ಎಂದು ಕಿಶೋರ್ ಪ್ರಶ್ನಿಸಿದ್ದಾರೆ ಪರೋಕ್ಷವಾಗಿ ಅವರು ರಾಹುಲ್ ಗಾಂಧಿ ಕುರಿತು ಮಾತನಾಡಿದ್ದಾರೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕೇರಳದ ವಯನಾಡಿನಿಂದ ಸ್ಪರ್ಧಿಸುತ್ತಿರುವ ಕುರಿತು ಪ್ರತಿಕ್ರಿಯಿಸಿರುವ ಕಿಶೋರ್, ಉತ್ತರ ಪ್ರದೇಶ, ಬಿಹಾರ ಹಾಗೂ ಮಧ್ಯ ಪ್ರದೇಶ ಗೆಲ್ಲದೇ ವಯನಾಡಿನಲ್ಲಿ ಗೆದ್ದರೆ ಯಾವುದೇ ಲಾಭವಾಗದು. ಉತ್ತರ ಪ್ರದೇಶದ ಅಮೇಥಿಯಲ್ಲಿ ಸ್ಪರ್ಧಿಸದೇ ಇದ್ದರೆ ತಪ್ಪು ಸಂದೇಶ ರವಾನೆಯಾಗುತ್ತದೆ ಎಂದವರು ತಿಳಿಸಿದ್ದಾರೆ. ಹಿಂದಿ ರಾಜ್ಯಗಳನ್ನು ಗೆಲ್ಲದೇ ಭಾರತವನ್ನು ಗೆಲ್ಲಲು ಸಾಧ್ಯವಾಗದು. ಹೀಗಾಗಿಯೇ 2014ರಲ್ಲಿ ಮೋದಿ ಅವರು ಗುಜರಾತ್ ಜೊತೆಗೆ ಉತ್ತರ ಪ್ರದೇಶದಿಂದಲೂ ಸ್ಪರ್ಧಿಸಿದ್ದರು.

ಕಾಂಗ್ರೆಸ್, ಸಮಾಜವಾದಿ ಪಕ್ಷ, ಆರ್‌ಜೆಡಿ, ಎನ್‌ಸಿಪಿ ಹಾಗೂ ತೃಣಮೂಲ ಕಾಂಗ್ರೆಸ್‌ಗಳು ತಮ್ಮ ನೆಲೆಗಳಲ್ಲಿ ಬಿಜೆಪಿ ವಿರುದ್ಧ ಹೋರಾಟ ನಡೆಸಲು ಸಾಧ್ಯವಾಗದ ಕಾರಣ ಬಿಜೆಪಿಗೆ ಗೆಲುವು ಸಿಗುತ್ತಿದೆ. ಪ್ರತಿಪಕ್ಷಗಳಿಗೆ ವಿಷಯ ಮಂಡನೆ, ನಾಯಕ ಹಾಗೂ ಅಜೆಂಡಾ ಇಲ್ಲ ಎಂಬ ಭಾವನೆ ಮೂಡುತ್ತಿದೆ ಎಂದು ಕಿಶೋರ್ ತಿಳಿಸಿದ್ದಾರೆ.

ಬಿಜೆಪಿಗೆ ನಿರಂತರ ಮುನ್ನಡೆ ಸಿಗುತ್ತಿಲ್ಲ. 2015 ಹಾಗೂ 2016ರಲ್ಲಿ ಬಿಜೆಪಿ ಹಲವಾರು ವಿಧಾನಸಭಾ ಚುನಾವಣೆಗಳಲ್ಲಿ ಸೋಲು ಕಂಡಿತ್ತು. ನಂತರದಲ್ಲಿ ಗುಜರಾತ್‌ನಲ್ಲಿ ಬಹುತೇಕ ಸೋಲಿನ ಅಂಚಿಗೆ ಬಂದಿತ್ತು. 2018ರಲ್ಲೂ ಹಲವು ರಾಜ್ಯಗಳಲ್ಲಿ ಸೋಲು ಕಂಡಿತ್ತು. ಆದರೆ, 2019ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪ್ರಮಾದ ಎಸಗಿತು ಎಂದು ಕಿಶೋರ್ ಅಭಿಪ್ರಾಯ ಪಟ್ಟಿದ್ದಾರೆ.

2020ರಲ್ಲಿ ಕೊರೊನಾ ಮಹಾಮಾರಿ ನಂತರವೂ ಮೋದಿ ಜನಪ್ರಿಯತೆ ಕಡಿಮೆಯಾಗಿತ್ತು. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಹೀನಾಯ ಸೋಲು ಕಂಡಿತ್ತು. ಆದರೆ, ಪ್ರತಿಪಕ್ಷದ ನಾಯಕರು ಈ ಹಂತದಲ್ಲಿ ತಮ್ಮ ಮನೆಯಲ್ಲೇ ಕುಳಿತರು. ಪ್ರಧಾನಿ ಮೋದಿ ಮತ್ತೆ ರಾಜಕೀಯವಾಗಿ ವಾಪಸ್ಸಾಗಲು ಕಾರಣವಾಯಿತು ಎಂದರು.

## ವದಂತಿಗಳಿಗೆ ಕಿವಿಗೊಡದಿರಿ

**(1ನೇ ಪುಟದಿಂದ)** ಸಮಾಲೋಚನಾ ಸಭೆ ಕರೆದಿದ್ದು, ಅವರ ಅಭಿಪ್ರಾಯಗಳನ್ನು ಸಹ ಸಂಗ್ರಹಿಸಿ ಮುಂದಿನ ನಡೆ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಬೆಂಗಳೂರಿನ ಮುಖ್ಯಮಂತ್ರಿಗಳ ನಿವಾಸದಲ್ಲಿ ಕಾಗಿನೆಲೆ ಗುರುಪೀಠದ ಶ್ರೀ ನಿರಂಜನಾನಂದ ಪುರಿ ಸ್ವಾಮೀಜಿ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಹರಿಹರ ಕಾಂಗ್ರೆಸ್ ಮುಖಂಡ ನಂದಿಗಾವಿ ಶ್ರೀನಿವಾಸ್ ಅವರೊಟ್ಟಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಮುಂದಿನ ದಿನಗಳಲ್ಲಿ ಅವಕಾಶ ನೀಡಲಾಗುವುದು ಎಂದರು.

ನಾನು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದರೂ ಗೆಲ್ಲುತ್ತೇನೆ ಎಂಬ ವಿಶ್ವಾಸವಿದೆ ಎಂದು ಮನವರಿಕೆ ಮಾಡಿಕೊಟ್ಟಿದ್ದೇನೆ ಎಂದು ತಿಳಿಸಿದ್ದಾರೆ.

**ರಂಜಾನ್ ರೋಜಾ ಟೈಮ್**
ದಿನಾಂಕ : 08.04.2024
ಇಫ್ತಾರ್ ಸಮಯ : 6:45
ದಿನಾಂಕ : 09.04.2024
ಸಹೇರಿ ಸಮಯ : 4:56

**ಹೆಚ್. ತೇಜೋಮಣಿ ನಿಧನ**



ದಾವಣಗೆರೆ ಆಂಜನೇಯ ಬಡಾವಣೆ 18ನೇ ಕ್ರಾಸ್, ಮನೆ ನಂ. 1806/19 ವಾಸಿ ಹೆಚ್. ತೇಜೋಮಣಿ, ನಿವೃತ್ತ BSNL ಉದ್ಯೋಗಿ ಇವರು ದಿನಾಂಕ 7.4.2024ರ ಭಾನುವಾರ ಸಂಜೆ 5ಕ್ಕೆ ನಿಧನರಾದರು. ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 08.04.2024ರ ಸೋಮವಾರ ಮಧ್ಯಾಹ್ನ 1ಗಂಟೆಗೆ ನಗರದ ಎಸ್.ಎಸ್. ಹೈಟೆಕ್ ಆಸ್ಪತ್ರೆ ಪಕ್ಕದಲ್ಲಿರುವ ರಾಮನಗರದ ರುದ್ರಭೂಮಿಯಲ್ಲಿ ನೆರವೇರಲಿದೆ.

## ವ್ಯಾಪಾರಿಗಳಿಗೆ ಪಿಎಂ ಸ್ವ-ನಿಧಿ ಸಂಜೀವಿನಿ

**(1ನೇ ಪುಟದಿಂದ)** ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಅಂದಾಜು 16,345 ಜನ ಬೀದಿ ಬದಿ ವ್ಯಾಪಾರಿಗಳಿಗೆ 19 ಕೋಟಿಯಷ್ಟು ಹಣ ನೀಡಲಾಗಿದೆ. ಇದಕ್ಕೆ ಸಂಸದ ಜಿ.ಎಂ.ಸಿದ್ದೇಶ್ವರ್ ಅವರ ಪ್ರಮಾಣಿಕ ಕೆಲಸವೂ ಕಾರಣ. ನೀವು ನನಗೆ ನೀಡುವ ಒಂದೊಂದು ಮತವೂ ಮೋದಿ ಜೀ ಅವರಿಗೆ ನೀಡಿದ ಮತಗಳು. ನಿಮ್ಮ ಜೀವನ ಮಟ್ಟ ಇನ್ನಷ್ಟು ಸುಧಾರಿಸಲು, ನಿಮ್ಮ ಮಕ್ಕಳ ಭವಿಷ್ಯ ಉಜ್ವಲಗೊಳ್ಳಲು ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗಬೇಕು ಎಂದು ಮನವಿ ಮಾಡಿದರು.

ದೂಡಾ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್, ಒಬಿಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಮಾಜಿ ಮೇಯರ್ ಬಿ.ಜಿ.ಅಜಯ್ ಕುಮಾರ್, ಬಿಜೆಪಿ ಯುವ ಮುಖಂಡರಾದ ಜಿ.ಎಸ್.ಅನಿತ್ ಕುಮಾರ್, ಪಾಲಿಕೆ ಸದಸ್ಯರಾದ ಸೋಗಿ ಶಾಂತಕುಮಾರ್, ಡಿ.ಎಲ್.ಆರ್.ಶಿವಪ್ರಕಾಶ್, ಮುಖಂಡರಾದ ಬಸವರಾಜ್, ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಗ್ಯ ಪಿಸಾಳೆ, ಮಹಿಳಾ ಮೋರ್ಚಾ ಮಾಜಿ ಅಧ್ಯಕ್ಷೆ ಜಯಮ್ಮ, ರೇಣುಕಾ ಕೃಷ್ಣ, ನಾಸಿರ್ ಅಹ್ಮದ್, ಗೌತಮ್ ಜೈನ್, ಟಿಂಕರ್ ಮಂಜಣ್ಣ, ಶಿವನಗೌಡ ಪಾಟೀಲ್, ತರಕಾರಿ ಶಿವು, ಕರಾಟೆ ಕೃಷ್ಣ, ಚೇತು ಭಾಯ್, ಬಿಜೆಪಿ ಕಾರ್ಯಕರ್ತರು ಸಾಥ್ ನೀಡಿದ್ದರು.



### ಸಂಕಷ್ಟ ಆಲಿಸಿದ ಗಾಯತ್ರಿ

ಶ್ರೀಮತಿ ಗಾಯತ್ರಿ ಸಿದ್ದೇಶ್ವರ ಅವರು ಗಡಿಯಾರ ಕಂಬದ ಮಾರ್ಕೆಟ್, ಕಾಯಿಪೇಟೆ ಮಾರ್ಕೆಟ್ ಭಾಗದಲ್ಲಿ ಪ್ರತಿಯೊಬ್ಬ ಬೀದಿ ಬದಿ ವ್ಯಾಪಾರಿಗಳ ಬಳಿ ತೆರಳಿ ಸಂಕಷ್ಟ ಆಲಿಸಿದರು. ಅವರ ಸಂಕಷ್ಟಕ್ಕೆ ಧ್ವನಿಯಾಗಲು, ಅವರ ಬೇಡಿಕೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಎಲ್ಲರ ಬಳಿಕ ಚರ್ಚಿಸಿದರು. ಪಿಎಂ ಸ್ವ-ನಿಧಿ ಯೋಜನೆ ಉಪಯೋಗಿಸಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಸಲಹೆ ನೀಡಿದರು. ಈ ಬಾರಿ ನರೇಂದ್ರ ಮೋದಿ ಅವರು ಮೂರನೇ ಬಾರಿಗೆ ಪ್ರಧಾನಿ ಆಗಬೇಕು ಅನ್ನೋದು ಎಲ್ಲ ವರ್ಗದವರ ಆಶಯ. ನೀವು ನನಗೆ ಹೆಚ್ಚಿನ ಸಂಖ್ಯೆಯಲ್ಲಿ ಮತ ನೀಡಿ ಗೆಲ್ಲಿಸಿ ಕಳುಹಿಸಿ. ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಂಡು ಎಂದು ಮನವಿ ಮಾಡಿದರು.



## ಕಾಂಗ್ರೆಸ್‌ಗೆ ಮತ ಕೇಳಲು ಧೈರ್ಯವಿದೆ : ಎಸ್ಸೆಸ್ಸೆಂ

(6ನೇ ಪುಟದಿಂದ) ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್. ಬಸವಂತಪ್ಪ ಮಾತನಾಡಿ, ದೇಶದ ಎಲ್ಲಾ ವರ್ಗದವರ ಪರವಾಗಿ ಕಾಂಗ್ರೆಸ್ ಕಾರ್ಯ ನಿರ್ವಹಿಸುತ್ತಿದೆ ಎಂದರು.

ರೈತರಿಗೊಸ್ಕರ ಸಹಕಾರ ಕ್ಷೇತ್ರವನ್ನು ಅಭಿವೃದ್ಧಿಗೊಳಿಸುವ ಕಾರ್ಯ ನಡಿಯುತ್ತಿದೆ. ನ್ಯಾಯಬೆಲೆ ಅಂಗಡಿಯವರು, ಹಳ್ಳಿಯಲ್ಲಿನ ಮಹಿಳೆಯರಿಗೆ ಕಾಂಗ್ರೆಸ್‌ಗೆ ಮತ ಹಾಕುವಂತೆ ಮನವರಿಕೆ ಮಾಡಲು ತಿಳಿಸಿದರು.

ಡಿಡಿಸಿಸಿ ಬ್ಯಾಂಕ್‌ನ ಹಿರಿಯ ನಿರ್ದೇಶಕ ಜೆ.ಆರ್. ಷಣ್ಮುಖಪ್ಪ ಪ್ರಾಸ್ತಾವಿಕ ಮಾತನಾಡಿದರು.

ಮಾಜಿ ಶಾಸಕ ಎಸ್. ರಾಮಪ್ಪ, ಮುಖಂಡ ನಂದಿಗಾವಿ ಶ್ರೀನಿವಾಸ್, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಅಧ್ಯಕ್ಷ ಕೋಗುಂಡಿ ಬಕ್ಕೇಶಪ್ಪ, ವಿಶ್ವನಾಥ್, ಶಿವ ಸಹಕಾರಿ ಬ್ಯಾಂಕ್ ಉಪಾಧ್ಯಕ್ಷ ಐಗೂರು ಸಿ. ಚಂದ್ರಶೇಖರ್, ಡಿಡಿಸಿಸಿ ಬ್ಯಾಂಕ್ ನಿರ್ದೇಶಕ ಮುದೇಗೌಡ್ರ ಗಿರೀಶ್, ಸಿಟಿ ಕೋ-ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಬಿ.ಹೆಚ್. ಪರಶುರಾಮಪ್ಪ, ಆರ್.ಜಿ. ಶ್ರೀನಿವಾಸ್ ಮೂರ್ತಿ, ಜಿ. ಮಂಜುನಾಥ್ ಪಾಟೀಲ್, ಹನಗವಾಡಿ ಕುಮಾರ್ ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಶ್ರೀ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಇಂದು ಅಮಾವಾಸ್ಯೆ ವಿಶೇಷ ಪೂಜೆ



ದಾವಣಗೆರೆಯ ದೇವರಾಜ ಅರಸು ಬಡಾವಣೆ 'ಎ' ಬ್ಲಾಕ್ ನಲ್ಲಿರುವ ಶ್ರೀ ಮಾತಾ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಯುಗಾದಿ ಅಮಾವಾಸ್ಯೆ ಪ್ರಯುಕ್ತ ಇಂದು ಶ್ರೀ ನಾಗಲಿಂಗೇಶ್ವರ ಸ್ವಾಮಿಗೆ ರುದ್ರಾಭಿಷೇಕ, ಮೃತ್ಯುಂಜಯ ಹೋಮ, ಪ್ರಧಾನ ದೇವತೆ ಶ್ರೀ ಮಾತಾ ಅನ್ನಪೂರ್ಣೇಶ್ವರಿಗೆ ಮಹಾ ಮಂಗಳಾರತಿ ಮತ್ತು ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ ಎಂದು ದೇವಸ್ಥಾನ ಸಮಿತಿ ಗೌರವ ಅಧ್ಯಕ್ಷ ಆರ್.ಜಿ. ನಾಗೇಂದ್ರ ಪ್ರಕಾಶ್ ತಿಳಿಸಿದ್ದಾರೆ.

ಶ್ರೀ ವಿನಾಯಕ ಸೇವಾ ಸಮಿತಿಯವರು ಸೇವಾಕರ್ತರಾಗಿದ್ದಾರೆ ಎಂದು ದೇವಸ್ಥಾನ ಸಮಿತಿ ಅಧ್ಯಕ್ಷ ಪ್ರಕಾಶ್ ಪಾಟೀಲ್ ವಿವರಿಸಿದ್ದಾರೆ.

## ಅಣಜಿ - ಆನಗೋಡು ಹೋಬಳಿಗಳಲ್ಲಿ ಇಂದುಪ್ರಭಾ ಮಲ್ಲಿಕಾರ್ಜುನ್ ಪ್ರವಾಸ



ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ॥ ಪ್ರಭಾ ಮಲ್ಲಿಕಾರ್ಜುನ್ ಅವರು ಇಂದು ಮಾಯಕೊಂಡ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ದಾವಣಗೆರೆ ತಾಲ್ಲೂಕಿನ ಅಣಜಿ ಮತ್ತು ಆನಗೋಡು ಹೋಬಳಿಯ ವಿವಿಧ ಗ್ರಾಮಗಳಲ್ಲಿ ಬೆಳಿಗ್ಗೆ 9.30 ರಿಂದ ರಾತ್ರಿ 9 ರವರೆಗೆ ಮತಯಾಚನೆ ಮಾಡುವರು. ಪ್ರಭಾ ಮಲ್ಲಿಕಾರ್ಜುನ್ ಅವರೊಂದಿಗೆ ಶಾಸಕ ಕೆ.ಎಸ್.ಬಸವಂತಪ್ಪ ಅವರು ಪ್ರಚಾರ ಕಾರ್ಯದಲ್ಲಿ ಭಾಗವಹಿಸುವರು ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಎಸ್.ಕೆ.ಚಂದ್ರಶೇಖರ್ ತಿಳಿಸಿದ್ದಾರೆ.

## ಆನ್‌ಲೈನ್‌ನಲ್ಲಿ ಇಂದು ಚಿಂತನ ಗೋಷ್ಠಿ

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ವತಿಯಿಂದ ಆನ್‌ಲೈನ್‌ನಲ್ಲಿ ಶರಣ ಚಿಂತನ ಗೋಷ್ಠಿ ಇಂದು ಬೆಳಿಗ್ಗೆ 7 ರಿಂದ 8.30ರವರೆಗೆ ನಡೆಯಲಿದೆ. ಜಿ.ವಿ. ಶ್ರೀರಾಮರೆಡ್ಡಿ ಅವರು ಧರ್ಮ - ಸಾಮಾಜಿಕ ತಲ್ಲಣಗಳು ಕುರಿತು ಉಪನ್ಯಾಸ ನೀಡುವರು. ಡಾ. ಕೆ.ಎಂ. ವೀರೇಶ್, ಕೆ.ಬಿ. ಪರಮೇಶ್ವರಪ್ಪ ಉಪಸ್ಥಿತರಿರುವರು.

## ಹವಾಮಾನ ಇಲಾಖೆಯಿಂದ ನಿಖರ ಮಾಹಿತಿ : ಮೊಹಾಪಾತ್ರ

ನವದೆಹಲಿ, ಏ. 7 - ಹವಾಮಾನ ಇಲಾಖೆ ಈಗ ಹೆಚ್ಚು ನಿಖರ ಮಾಹಿತಿ ನೀಡುತ್ತಿದೆ ಹಾಗೂ ಜನರಿಗೆ ಸೂಕ್ತ ರೀತಿಯಲ್ಲಿ ಮಾಹಿತಿ ನೀಡುತ್ತಿದೆ ಎಂದು ಹವಾಮಾನ ಇಲಾಖೆಯ ಮುಖ್ಯಸ್ಥ ಮೃತ್ಯುಂಜಯ ಮೊಹಾಪಾತ್ರ ಹೇಳಿದ್ದಾರೆ.

ಹವಾಮಾನ ಇಲಾಖೆ ತನ್ನ ತಾಂತ್ರಿಕತೆ ಹಾಗೂ ನಿಖರತೆ ಸುಧಾರಿಸಿಕೊಂಡಿದೆ. ಈ ಕಾರಣದಿಂದ ಹವಾಮಾನ ಇಲಾಖೆಯ ಕುರಿತ ಪರಿಕಲ್ಪನೆ ಬದಲಾಗುತ್ತಿದೆ ಎಂದು ಮೊಹಾಪಾತ್ರ ತಿಳಿಸಿದ್ದಾರೆ.

ಪರಿಸ್ಥಿತಿ ಈಗ ಬದಲಾಗಿದೆ. ಜನರು ಮಹತ್ವದ ನಿರ್ಧಾರಗಳಿಗೆ ಸಂಬಂಧಿಸಿದಂತೆ ಹವಾಮಾನ ಇಲಾಖೆಯನ್ನು ಅವಲಂಬಿಸುತ್ತಿದ್ದಾರೆ. ಮದುವೆಯಂತಹ ಸಮಾರಂಭಗಳಿಗೂ ಹವಾಮಾನ ಇಲಾಖೆಯ ಮಾಹಿತಿ ಪಡೆಯಲಾಗುತ್ತಿದೆ ಎಂದವರು ಹೇಳಿದ್ದಾರೆ. ಆಹಾರ ಪೂರೈಕೆ ಕಂಪನಿಯಾದ ಜೊಮಾಟೋದಿಂದ ಹಿಡಿದು ರಿಸರ್ವ್ ಬ್ಯಾಂಕ್‌ವರೆಗೆ ಹವಾಮಾನ ಕಚೇರಿಯ ಮುನ್ಸೂಚನೆಗಳನ್ನು ಅವಲಂಬಿಸಿ ನಿರ್ಧಾರ ತೆಗೆದುಕೊಳ್ಳುತ್ತಿವೆ ಎಂದವರು ತಿಳಿಸಿದರು.

ಚಂಡಮಾರುತಗಳ ಮುನ್ಸೂಚನೆ ಕಾರಣದಿಂದ ಜನರ ಜೀವನ ಹಾಗೂ ಆಸ್ತಿಗಳ ರಕ್ಷಣೆ ಸಾಧ್ಯವಾಗಿದೆ. ಈ ವಿಷಯದಲ್ಲಿ ಭಾರತದ ಹವಾಮಾನ ಮುನ್ಸೂಚನೆಯು ಅಮೆರಿಕದ ನ್ಯಾಷನಲ್ ಹರಿಕೇನ್ ಸೆಂಟರ್‌ಗಿಂತ ಉತ್ತಮವಾಗಿದೆ ಎಂದವರು ತಿಳಿಸಿದರು.

ಹವಾಮಾನ ಇಲಾಖೆಯ ಮುನ್ಸೂಚನೆ ಸಾಮರ್ಥ್ಯ ಸಾಕಷ್ಟು ಹಿಂದೆಯೇ ಅಭಿವೃದ್ಧಿಯಾಗಿತ್ತು. ಆದರೆ, ಜನರಿಗೆ ತಲುಪಿಸುವುದರಲ್ಲಿ ತಂತ್ರಜ್ಞಾನದ ಕೊರತೆ ಇತ್ತು. ಕೆಲವೊಮ್ಮೆ ಹವಾಮಾನ ಇಲಾಖೆ ಲೇವಡಿಗೂ ಗುರಿಯಾಗುತ್ತಿತ್ತು. ಈಗ ಚಂಡಮಾರುತದ ಮುನ್ಸೂಚನೆ ಸುಧಾರಿಸಿದ್ದು, ಸಾವಿರಗಳ ಸಂಖ್ಯೆಯಲ್ಲಿ ಸಂಭವಿಸುತ್ತಿದ್ದ ಸಾವುಗಳ ಸಂಖ್ಯೆ ಹತ್ತಿಪ್ಪತ್ತಕ್ಕೆ ಇಳಿದಿದೆ ಎಂದವರು ಹೇಳಿದರು.

# ರೈಲ್ವೇ ಕೆಳ ಸೇತುವೆ ಅವೈಜ್ಞಾನಿಕ ಕಾಮಗಾರಿ



### ಜಿಲೇಬಿ ಮಾಡಿ ಪ್ರತಿಭಟಿಸಿದ ಮಹಿಳಾ ಕಾಂಗ್ರೆಸ್

ದಾವಣಗೆರೆ, ಏ.7- ನಗರದ ಅಶೋಕ ಟಾಕೀಸ್ ರೈಲ್ವೆ ಗೇಟ್ ಬಳಿ ಇಂದು ವಿನೂತನ ಪ್ರತಿಭಟನೆ ನಡೆಸಿದ ಜಿಲ್ಲಾ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು, ಜಿಲೆಬಿ ಮಾಡಿ ಪ್ರತಿರೋಧ ವ್ಯಕ್ತಪಡಿಸಿ ಕೆಳಸೇತುವೆಯಲ್ಲಿ ವಾಹನ ಚಲಾಯಿಸಿದ ಸವಾರರರಿಗೆ ಜಿಲೇಬಿ ವಿತರಿಸಿದರು.

ಸಾರ್ವಜನಿಕರು ಜೀವ ಕೈಯಲ್ಲಿ ಹಿಡಿದುಕೊಂಡು ಹೋಗುವಂತಹ ರೈಲ್ವೆ ಕೆಳಸೇತುವೆ ನಿರ್ಮಿಸಿರುವ ಸಂಸದ ಜಿ.ಎಂ.ಸಿದ್ದೇಶ್ವರ ಅವರ ಪ್ರತಿಮೆಯನ್ನು ದಾವಣಗೆರೆಯ ಅಶೋಕ ಟಾಕೀಸ್ ರೈಲ್ವೆ ಗೇಟ್ ಬಳಿ ಸ್ಥಾಪಿಸಬೇಕೆಂದು ಅನಿತಾಬಾಯಿ ಮಾಲತೇಶ್ ವ್ಯಂಗ್ಯವಾಡಿದರು.

ಸಿದ್ದೇಶ್ವರ ಅವರು ಮಾಡಿರುವ ಕೆಲಸ ಬೆರಳಣಿಕೆಯಷ್ಟು ಮಾತ್ರ. ಆದರೆ, ಅವೂ ಸಹ ಅವೈಜ್ಞಾನಿಕ ಮತ್ತು ಕಳಪೆಯಿಂದ ಕೂಡಿವೆ ಇಂತಹ ಕಾಮಗಾರಿಗಳ ಬಳಿ ಮಹಿಳಾ ಕಾಂಗ್ರೆಸ್ ಪ್ರತಿಭಟನೆ ನಡೆಸಿ ಸಾರ್ವಜನಿಕರ ಗಮನ ಸೆಳೆಯಲಾಗುವುದು ಎಂದರು.

ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯ ದರ್ಶಿ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಸಂಸದರು ಮಾಡಿರುವ ಕೆಲವೇ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು, ಇಂತಹ ಕಾಮಗಾರಿ ಗಳಿಂದ ದಾವಣಗೆರೆಗೆ ಕಳಂಕವಾಗಿವೆ ಎಂದು ದೂರಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ. ಬಸವರಾಜ್, ಮಹಾನಗರ ಪಾಲಿಕೆ ಸದಸ್ಯ ಕೆ.ಚಮನ್ ಸಾಬ್ ಮಾತನಾಡಿ, ಸಂಸದರು ನಾಲ್ಕು ಬಾರಿ ಆಯ್ಕೆಯಾದರೂ ಸಹ ಒಂದೇ ಒಂದು ಶಾಶ್ವತ ಕೆಲಸಗಳನ್ನು ಮಾಡಲಿಲ್ಲ. ಇಂದು ಅವರ ಶ್ರೀಮತಿಯವರನ್ನು ಅಭ್ಯರ್ಥಿ ಮಾಡಿ ಸ್ವಪಕ್ಷಿಯರಿಂದಲೇ ವಿರೋಧ ವ್ಯಕ್ತವಾಗಿದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಅಯೂಬ್ ಪೈಲ್ವಾನ್, ಕೆ.ಜಿ. ಶಿವಕುಮಾರ್, ಮಹಾನಗರ ಪಾಲಿಕೆ ಸದಸ್ಯ ಎ.ನಾಗರಾಜ್, ಮಹಿಳಾ ಕಾಂಗ್ರೆಸ್‌ನ ಕವಿತಾ ಚಂದ್ರಶೇಖರ್, ಉಮಾ ಕುಮಾರ್, ದ್ರಾಕ್ಷಾಯಣಮ್ಮ, ಮಂಗಳಮ್ಮ, ಮಂಜಮ್ಮ, ಶುಭಮಂಗಳ, ರಾಜೇಶ್ವರಿ, ಕಾವ್ಯ, ಜಯಮ್ಮ, ಕಮಲಮ್ಮ, ಸಲ್ಮಾ, ಶಿಲ್ಪ, ಕಾವೇರಿ, ರಂಗಸ್ವಾಮಿ, ಮೊಟ್ಟೆ ದಾದಾಪೀರ್ ಮತ್ತಿತರರಿದ್ದರು.

## ಕಾಂಗ್ರೆಸ್ ನಾಯಕರು ಸಮಗ್ರತೆ, ಸನಾತನ ಧರ್ಮಕ್ಕೆ ವಿರುದ್ಧ



ನವಾಡ (ಬಿಹಾರ), ಏ. 7 - ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆಯಲ್ಲಿ ಮುಸ್ಲಿಂ ಲೀಗ್ ಛಾಯೆ ಇದೆ. ಕಾಂಗ್ರೆಸ್ ನಾಯಕರು ರಾಷ್ಟ್ರದ ಸಮಗ್ರತೆ ಹಾಗೂ ಸನಾತನ ಧರ್ಮಕ್ಕೆ ವಿರುದ್ಧವಾಗಿದ್ದಾರೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಆರೋಪಿಸಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕರ್ನಾಟಕ ಸಂಸದ ಡಿ.ಕೆ.ಸುರೇಶ್ ನೀಡಿದ ಹೇಳಿಕೆಗಳನ್ನು ಪ್ರಸ್ತಾಪಿಸಿರುವ ಪ್ರಧಾನಿ ಮೋದಿ, ಇವರ ಹೇಳಿಕೆಗಳಿಂದ ಕಾಂಗ್ರೆಸ್ ಮನೋಭಾವ ತಿಳಿಯಬಹುದು ಎಂದಿದ್ದಾರೆ.

ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಸ್ಥಾನ ಸಣ್ಣದೇನಲ್ಲ. ಈ ಸ್ಥಾನದಲ್ಲಿರುವವರು 370ನೇ ವಿಧಿಗೂ ರಾಜಸ್ಥಾನಕ್ಕೂ ಸಂಬಂಧವಿಲ್ಲ ಎನ್ನುತ್ತಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಲ್ಲವೇ? ಖರ್ಗೆ ಹೇಳಿಕೆಯಿಂದ ತುಕ್ಡೇ ತುಕ್ಡೇ ಗ್ಯಾಂಗ್ ಮನೋಭಾವ ಕಂಡು ಬರುತ್ತಿದೆ ಎಂದು ಮೋದಿ ಟೀಕಿಸಿದ್ದಾರೆ.

ದಕ್ಷಿಣ ಭಾರತವನ್ನು ಪ್ರತ್ಯೇಕ ರಾಷ್ಟ್ರ ಮಾಡುವುದಾಗಿ ಕರ್ನಾಟಕದ ಸಂಸದ ಡಿ.ಕೆ. ಸುರೇಶ್ ಬಹಿರಂಗವಾಗಿ ಹೇಳಿದ್ದಾರೆ. ಕಾಂಗ್ರೆಸ್‌ನ ಹಿರಿಯ ನಾಯಕರ ಹೇಳಿಕೆಗಳಿಂದ ಆ ಪಕ್ಷದ ಮನೋಭಾವ ತಿಳಿಯಬಹುದು ಎಂದು ಮೋದಿ ಹೇಳಿದರು.

ವಿಪಕ್ಷವಾದ ಐ.ಎನ್.ಡಿ.ಐ.ಎ. ನಾಯಕರು ಸಂವಿಧಾನದ ಬಗ್ಗೆ ಬಹಳಷ್ಟು ಮಾತನಾಡುತ್ತಾರೆ. ಆದರೆ, 370ನೇ ವಿಧಿಯ ಕಾರಣದಿಂದಾಗಿ ಜಮ್ಮು ಮತ್ತು ಕಾಶ್ಮೀರದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನ ಸಂಪೂರ್ಣ ಜಾರಿಗೆ ತರಲು ಸಾಧ್ಯವಾಗಲಿಲ್ಲ. ಈ ಕೆಲಸ ಮಾಡಲು ಮೋದಿ ಬರಬೇಕಾಯಿತು ಎಂದರು.

## ಅವಧಿ ಮೀರಿ ಉಳಿದುಕೊಂಡಿದ್ದ ವಿದೇಶಿ ವಿದ್ಯಾರ್ಥಿಗಳ ಹಾಸ್ಟಲ್‌ನಿಂದ ತೆರವು

ಅಹಮದಾಬಾದ್, ಏ. 7 - ಅವಧಿ ಮೀರಿ ಉಳಿದುಕೊಂಡಿರುವ ಆಫ್ಘಾನಿಸ್ತಾನದ ಆರು ಹಾಗೂ ಪೂರ್ವ ಆಫ್ರಿಕಾದ ಓರ್ವ ವಿದ್ಯಾರ್ಥಿ ಹಾಸ್ಟೆಲ್ ಕೋಣೆ ತೆರವುಗೊಳಿಸುವಂತೆ ಗುಜರಾತ್ ವಿಶ್ವವಿದ್ಯಾಲಯ ತಿಳಿಸಿದೆ. ವಿಶ್ವವಿದ್ಯಾಲಯದ ಆವರಣದಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದೇಶಿ ವಿದ್ಯಾರ್ಥಿಗಳು ನಮಾಜ್ ಮಾಡುವ ವೇಳೆ ಹಲ್ಲೆ ನಡೆದಿತ್ತು. ಹಲ್ಲೆ ನಡೆದ ಕೆಲ ವಾರಗಳ ನಂತರ ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ನೀರಜಾ ಗುಪ್ತ ಹೇಳಿದ್ದಾರೆ.

## ಕಳುವಾಗಿದ್ದ ನಡ್ಡಾ ಪತ್ನಿ ವಾಹನ ಪತ್ತೆ

ನವದೆಹಲಿ, ಏ. 7 – ಎರಡು ವಾರಗಳ ಹಿಂದೆ ಕಳುವಾಗಿದ್ದ ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಪತ್ನಿಯ ಎಸ್.ಯು.ವಿ. ವಾಹನವನ್ನು ದೆಹಲಿ ಪೊಲೀಸರು ವಶಕ್ಕೆ ತೆಗೆದುಕೊಂಡಿದ್ದಾರೆ. ದೆಹಲಿಯ ಗೋವಿಂದಪುರಿಯಲ್ಲಿ ಕಳ್ಳತನವಾಗಿದ್ದ ವಾಹನವನ್ನು, ಉತ್ತರ ಪ್ರದೇಶದ ವಾರಣಾಸಿಯಲ್ಲಿ ಪತ್ತೆ ಮಾಡಲಾಗಿದೆ. ವಾಹನ ಕಳ್ಳತನ ಮಾಡಿದ್ದ ಮೂವರನ್ನು ಬಂಧಿಸಲಾಗಿದೆ. ಶಿವಾಂಶ್ ತ್ರಿಪಾಠಿ, ಸಲೀಂ ಹಾಗೂ ಮೊಹಮ್ಮದ್ ರಯೀಸ್ ಬಂಧಿಸಲಾಗಿದ್ದು, ಇವರೆಲ್ಲರೂ ಉತ್ತರ ಪ್ರದೇಶದವರು. ಮಾರ್ಚ್ 19ರಂದು ವಾಹನ ಚಾಲಕ ಜೋಗಿಂದರ್ ಅವರು ಸರ್ವೀಸ್ ಸೆಂಟರ್‌ನಲ್ಲಿ ವಾಹನ ಬಿಟ್ಟಿದ್ದರು. ಅಲ್ಲಿಂದ ವಾಹನ ಕಳ್ಳತನ ಮಾಡಲಾಗಿತ್ತು.

## ಗಂಗನರಸಿಯಲ್ಲಿ ಇಂದು ಯುಗಾದಿ ವಿಶೇಷ ಪೂಜೆ

ಹರಿಹರ ತಾಲ್ಲೂಕಿನ ಗಂಗನರಸಿ ಗ್ರಾಮದ ಶ್ರೀ ಗೋಣಿ ಬಸವೇಶ್ವರ ಹೊರ ಮಠದಲ್ಲಿ ಯುಗಾದಿ ಅಮಾವಾಸ್ಯೆಯ ವಿಶೇಷ ಪೂಜಾ ಕಾರ್ಯಕ್ರಮಗಳು ನಾಳೆ ನಡೆಯಲಿವೆ.

ಬೆಳಿಗ್ಗೆ 11 ಗಂಟೆಗೆ ಶ್ರೀ ಗೋಣಿ ಬಸವೇಶ್ವರ ಹಾಗೂ ನಾಗದೇವತಾ ಸ್ವಾಮಿಗಳಿಗೆ ಅಮಾವಾಸ್ಯೆಯ ವಿಶೇಷ ಪೂಜೆ, ಅಭಿಷೇಕ, ಮಹಾಮಂಗಳಾರತಿ ನಡೆಯುವುದು. ನಂತರ 11.30 ಕ್ಕೆ ಮಹಾ ಪ್ರಸಾದ ಸೇವೆ ಜರುಗುವುದು.

ಕಕ್ಕರಗೊಳ್ಳದ ಸುಲ್ತಾನಪ್ಪನವರ ಬಸವರಾಜಪ್ಪ ಮತ್ತು ಸಹೋದರರು, ಪ್ರಸಾದದ ವ್ಯವಸ್ಥೆ ಏರ್ಪಡಿಸಿದ್ದಾರೆ. ಶ್ರೀ ಗೋಣಿ ಬಸವೇಶ್ವರ ಸ್ವಾಮಿ ಹೊರಮಠ ಹಾಗೂ ಶ್ರೀ ಹನುಮಂತದೇವರ ಜೀರ್ಣೋದ್ಧಾರ ಸಮಿತಿ ಆಶ್ರಯದಲ್ಲಿ ಕಾರ್ಯಕ್ರಮಗಳು ನಡೆಯಲಿವೆ ಎಂದು ಅಧ್ಯಕ್ಷ ಜಿ.ಎಂ. ನಾಗೇಂದ್ರಪ್ಪ, ಕಾರ್ಯದರ್ಶಿ ಗೌಡ್ರ ಚನ್ನಬಸಪ್ಪ ತಿಳಿಸಿದ್ದಾರೆ.

## ಮಲೇಬೆನ್ನೂರಿನಲ್ಲಿ ನಂದಿಗುಡಿ ರಸ್ತೆ ಡಾಂಬರೀಕರಣ : ನಾಗರಿಕರ ಹರ್ಷ



ಮಲೇಬೆನ್ನೂರು, ಏ. 7 - ಪಟ್ಟಣದಲ್ಲಿ ಕಳೆದ 3 ತಿಂಗಳಿಂದ ನೆನೆಗುದಿಗೆ ಬಿದ್ದಿದ್ದ ಮಲೇಬೆನ್ನೂರು-ನಂದಿಗುಡಿ ರಸ್ತೆ ಡಾಂಬರೀಕರಣ ಕಾಮಗಾರಿ ಶುಕ್ರವಾರ ಆರಂಭವಾಗಿರುವುದಕ್ಕೆ ರಸ್ತೆ ಅಕ್ಕ-ಪಕ್ಕದ ಜನತೆ ಹರ್ಷ ವ್ಯಕ್ತಪಡಿಸಿದ್ದಾರೆ.

ಈಗಾಗಲೇ ಪುರಸಭೆಯ ನಗರೋತ್ಥಾನ ಯೋಜನೆ ಅಡಿ ರಸ್ತೆಯ ಎರಡೂ ಬದಿ ಕಾಂಕ್ರೀಟ್ ಚರಂಡಿ ನಿರ್ಮಿಸಲಾಗಿತ್ತು. ಆದರೆ ಡಾಂಬರೀಕರಣ ಮಾಡಲು ರಸ್ತೆ ಅಗೆದು ವೆಟ್ ಮಿಕ್ಸ್ ಹಾಕಿ ಸ್ವಲ್ಪ ದಿನ ಹಾಗೆ ಬಿಟ್ಟಿದ್ದರಿಂದ ರಸ್ತೆಯ ದೂಳಿನಿಂದ ಇಲ್ಲಿನ ನಿವಾಸಿಗಳಿಗೆ ಹಾಗೂ ಪ್ರಯಾಣಿಕರಿಗೆ ಬಹಳ ತೊಂದರೆ ಆಗಿತ್ತು. ರಸ್ತೆ ಕಲ್ಲು ಕಿತ್ತು ಬಂದು ಗುಂಡಿ ಬಿದ್ದಿದ್ದವು. ವಾಹನ ನಿಲುಗಡೆಗೂ ಕಷ್ಟವಾಗಿತ್ತು. ಇದರಿಂದ ಬೇಸತ್ತ ವ್ಯಾಪಾರಿಗಳು ಕಾಮಗಾರಿ ಮಾಡುವಂತೆ ಪ್ರತಿಭಟನೆ ಮಾಡಿ ಗಮನ ಸೆಳೆದಿದ್ದರು.

ಇದೀಗ ರಸ್ತೆ ಡಾಂಬರೀಕರಣ ಆಗುತ್ತಿರುವುದಕ್ಕೆ ಸಂತಸಗೊಂಡಿರುವ ವ್ಯಾಪಾರಿಗಳು ಮತ್ತು ನಾಗರಿಕರು ಕಾಮಗಾರಿಯ ಗುಣಮಟ್ಟ ಕಾಪಾಡುವಂತೆ ಮತ್ತು ತುರ್ತಾಗಿ ಕಾಮಗಾರಿ ಮುಗಿಸುವಂತೆ ಆಗ್ರಹಿಸಿದ್ದಾರೆ.


ರಸಗೊಬ್ಬರ ವ್ಯಾಪಾರಿ ಎಂ. ಕರಿಬಸಯ್ಯ ಅವರು ಕಾಮಗಾರಿ ಗುಣಮಟ್ಟ ಹೆಚ್ಚಿಸುವಂತೆ ಇಂಜಿನಿಯರ್ ಹಾಗೂ ಗುತ್ತಿಗೆದಾರರಿಗೆ ತಿಳಿಸಿದ್ದಾರೆ.

4 ಕೋಟಿ ರೂ. ವೆಚ್ಚದಲ್ಲಿ ಮಲೇಬೆನ್ನೂರಿನಿಂದ ಕೊಕ್ಕನೂರು ವರೆಗೆ 7 ಮೀ ಅಗಲದ ರಸ್ತೆ ಮರುಡಾಂಬರೀಕರಣ ಮತ್ತು ಅಲ್ಲಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡಿಸಲಾಗುತ್ತಿದೆ ಎಂದು ಇಂಜಿನಿಯರ್ ಶಿವಮೂರ್ತಿ ತಿಳಿಸಿದರು. ಗುತ್ತಿಗೆದಾರ ಬಿ.ಎಂ. ಜಗದೀಶ್ವರ ಸ್ವಾಮಿ ಮಾತನಾಡಿ, ಗುಣಮಟ್ಟದ ರಸ್ತೆ ನಿರ್ಮಿಸುವುದಾಗಿ ತಿಳಿಸಿದರು.

## ಕಾಳಿಕಾದೇವಿ ದೇವಸ್ಥಾನದಲ್ಲಿಂದು ಅಮಾವಾಸ್ಯೆ

ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಯುಗಾದಿ ಅಮಾವಾಸ್ಯೆ ಪ್ರಯುಕ್ತ ಇಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ ಮತ್ತು ಗೋಧಿ ಉಡಿ ತುಂಬುವುದು, ನಂತರ ಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗವಿರುತ್ತದೆ. ನಾಳೆ ಮಂಗಳವಾರ ಯುಗಾದಿ ಪಾಡ್ಯದಂದು ಬೆಳಿಗ್ಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ, ಮಂಗಳಾರತಿ, ಸಂಜೆ 6-30ಕ್ಕೆ ಯುಗಾದಿ ಪ್ರಯುಕ್ತ ಶ್ರೀ ರಥೋತ್ಸವವನ್ನು ದೇವಸ್ಥಾನದಿಂದ ರಾಜಬೀದಿಗಳಲ್ಲಿ ನೆರವೇರಿಸಲಾಗುವುದು.

## ನೊಂದವರಿಗೆ ಸಲ್ಲುವ ಸಹಾಯವೇ ನಿಜವಾದ ದೇವರ ಸೇವೆ : ಷರೀಫ್



### ಹರಪನಹಳ್ಳಿ

ಹರಪನಹಳ್ಳಿ, ಏ. 7 - ನೊಂದವರಿಗೆ ಸಲ್ಲುವ ಸಹಾಯವೇ ನಿಜವಾದ ದೇವರ ಸೇವೆ ಎಂದು ಜಿಲ್ಲಾ ಸರ್ಕಾರಿ ಮುಸ್ಲಿಂ ನೌಕರರ ಅಧ್ಯಕ್ಷ ಎಂ. ಷರೀಫ್ ಹೇಳಿದರು.

ಪಟ್ಟಣದ ಅಂಜುಮನ್ ಶಾದಿ ಮಹಲ್‌ನಲ್ಲಿ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ರಂಜಾನ್ ಹಬ್ಬದ ಪ್ರಯುಕ್ತ ನಿರ್ಗತಿಕ, ಬಡ ಕುಟುಂಬಗಳಿಗೆ ಆಹಾರ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು. ರಂಜಾನ್ ಹಬ್ಬವು ದಾನ, ಧರ್ಮದ ಸಂಕೇತವಾಗಿದ್ದು, ಅದನ್ನು ಯಾವುದೇ ಜಾತಿ, ಧರ್ಮಕ್ಕೆ ಹೊಲಿಸದೇ ಮಾನವ ಧರ್ಮ ಒಂದೇ ಎಂಬ ಉದ್ದೇಶದಿಂದ ಆಹಾರ ಕಿಟ್ ವಿತರಣೆ ಮಾಡುವುದೇ ನಮ್ಮ ಸಂಸ್ಥೆಯ ಧ್ಯೇಯವಾಗಿದೆ ಎಂದರು.

ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಅಧ್ಯಕ್ಷ ಕೆ.ಎಸ್. ಉಸ್ಮಾನ್ ಮಾತನಾಡಿ, ಮಾನವೀಯ ದೌರ್ಬಲ್ಯಗಳಿಂದ ಮನುಷ್ಯನನ್ನು ಮುಕ್ತಗೊಳಿಸಿ ದೇಹ ಮತ್ತು ಆತ್ಮವನ್ನು ಪವಿತ್ರ ಗೊಳಿಸುವುದೇ 1 ತಿಂಗಳ ಪೂರ್ಣ ವ್ರತಾಚರಣೆ ಉದ್ದೇಶವಾಗಿದೆ ಎಂದರು.

ಕಾರ್ಯದರ್ಶಿ ಹೆಚ್. ಸಲಿಂ ಮಾತನಾಡಿ, ಧಾರ್ಮಿಕ ಬಾಂಧವ್ಯವನ್ನು ಬಲಪಡಿಸುವ ಮತ್ತು ನಮ್ಮ ಸುತ್ತಲಿನ ಜನರೊಂದಿಗೆ ದಯೆ ತೋರುವ ದಿನವಾಗಿ ಈ ಹಬ್ಬವನ್ನು ಆಚರಿಸಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಪದಾಧಿಕಾರಿ ಎಂ. ಯಾಹ್ಯ, ಉಪಾಧ್ಯಕ್ಷ ಎಸ್. ಶಫಿ, ನಿರ್ದೇಶಕ ಅರ್ಜುನ ಮುನ್ನಿಸ್, ಸಿ.ಆರ್.ಪಿ. ರುಕ್ಸಾನ್, ಅಬ್ದುಲ್ ಸಲಾಂ, ಮುಖಂಡ ಗುಲಾಬ್ ಜಾನ್, ಅಮಾನುಲ್ಲಾ, ನೂರುಲ್ಲಾ, ಶಬ್ಬೀರ್, ದಾದಪೀರ್, ಹುಸೇನ್ ಪೀರ್, ಜಮಾಲುದ್ದೀನ್, ಪೀರಾ ಸಾಹೇಬ್, ನಜೀರ್, ಎಸ್. ನಗೀನ, ನಫೀಸಾ ಸೇರಿದಂತೆ ಇತರರು ಇದ್ದರು.

## ಸಿಎಂ ಅರವಿಂದ್ ಕೇಜ್ರಿವಾಲ್ ಬಂಧನ ಖಂಡಿಸಿ ಎಎಪಿ ಸತ್ಯಾಗ್ರಹ



ದಾವಣಗೆರೆ, ಏ. 7- ದೆಹಲಿಯ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅಕ್ರಮ ಬಂಧನ ಖಂಡಿಸಿ ಆಮ್ ಆದ್ಮಿ ಪಕ್ಷದ ಜಿಲ್ಲಾ ಸಮಿತಿ ಕಾರ್ಯಕರ್ತರು ಭಾನುವಾರ ಜಿಲ್ಲಾಧಿಕಾರಿ ಕಚೇರಿ ಮುಂದೆ ಉಪವಾಸ ಸತ್ಯಾಗ್ರಹ ನಡೆಸಿದರು.

ಇದೇ ವೇಳೆ ಪಕ್ಷದ ಜಿಲ್ಲಾಧ್ಯಕ್ಷ ಕೆ.ಎಸ್. ಶಿವಕುಮಾರಪ್ಪ ಮಾತನಾಡಿ, ದೇಶದಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆಯಾಗುತ್ತಿದೆ. ಸಾಮಾನ್ಯ ಜನರ ಮಾತನಾಡುವ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಪ್ರಯತ್ನಗಳು ನಡೆಯುತ್ತಿವೆ ಎಂದು ಕಿಡಿಕಾರಿದರು.

ಕೇಂದ್ರ ಸರ್ಕಾರ ಸಿಬಿಐ, ಐಟಿ ಮುಂತಾದ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ವಿರೋಧ ಪಕ್ಷದ ನಾಯಕರನ್ನು ಬಂಧಿಸುವ ಕೆಲಸ ಮಾಡುತ್ತಿದೆ. ಸಂವಿಧಾನದ ಆಶಯಗಳಿಗೆ ವಿರುದ್ಧವಾದ ನೀತಿಗಳನ್ನು ಅನುಸರಿಸುವ ಮೂಲಕ ಸರ್ಕಾರ ನಡೆಸುತ್ತಿದೆ ಎಂದು ಹೇಳಿದರು.


ದೇಶದ ಯುವಜನರು ಉದ್ಯೋಗವಿಲ್ಲದೇ ನಿರುದ್ಯೋಗಿಗಳಾಗಿದ್ದಾರೆ. ಬಡವರಿಗೆ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ತುಳಿಯಲಾಗುತ್ತಿದೆ. ಉದ್ಯೋಗ ಮಾಡುವ ಜನರಿಗೆ ಸರಿಯಾದ ಅವಕಾಶಗಳು ಸಿಗುತ್ತಿಲ್ಲ. ಅನೇಕ ಕೈಗಾರಿಕೆಗಳು ಅವನತಿ ಅಂಚಿನಲ್ಲಿವೆ. ಬಡತನ ಹೆಚ್ಚಾಗಿದೆ. ಆದರೂ ಸಹ ಕೇಂದ್ರ ಸರ್ಕಾರ ವಿಪಕ್ಷ ನಾಯಕರನ್ನು ಬಂಧಿಸುವಲ್ಲಿ ಮುಂದಾಗಿದೆ. ಈ ಕೂಡಲೇ ಅರವಿಂದ್ ಕೇಜ್ರಿವಾಲ್ ಅವರನ್ನು ಬಿಡುಗಡೆ ಮಾಡಬೇಕು. ದೇಶಾದ್ಯಂತ ನಿಷ್ಪಕ್ಷಪಾತ ಚುನಾವಣೆಗೆ ಅವಕಾಶ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಸತ್ಯಾಗ್ರಹದಲ್ಲಿ ಆಮ್ ಆದ್ಮಿ ಪಾರ್ಟಿಯ ಪದಾಧಿಕಾರಿಗಳಾದ ಸಿ.ಆರ್. ಅರುಣ್ ಕುಮಾರ್, ಆದಿಲ್ ಖಾನ್, ರವೀಂದ್ರ ಕೆ. ಸುರೇಶ್ ಸಿದ್ಲಪ್ಪ, ಧರ್ಮಾನಾಯ್ಕ, ಜಿ.ಹೆಚ್.ಬಸವರಾಜ್, ಮಹಮ್ಮದ್ ಯೂಸೂಫ್, ಮಲ್ಲೇಶ್ ಮತ್ತಿತರರು ಪಾಲ್ಗೊಂಡಿದ್ದರು.

**ಜನ್ಮದಿನದ ಶುಭಾಶಯಗಳು**



ಯುವ ಮುಖಂಡರೂ, ಹಿತೈಷಿಗಳೂ, ಆತ್ಮೀಯರೂ ಆದ
**ಶ್ರೀ ಹೆಚ್.ಎಸ್. ನಾಗರಾಜ್**
ಅವರಿಗೆ ಜನ್ಮ ದಿನದ ಶುಭಾಶಯಗಳು.



**ಎಂ.ಎನ್. ನಾಗರಾಜ್**
ಹೆಚ್. ಶಿವಪ್ಪ ಅಭಿಮಾನಿ

**ಸಾರ್ವಜನಿಕ ಪ್ರಕಟಣೆ**

ನನ್ನ ಕಕ್ಷಿದಾರರಾದ ಉಮೇಶನಾಯ್ಕ ಬಿನ್ ರಾಮನಾಯ್ಕ ಇವರು ಜಿ. ವಿಜಯಕುಮಾರ್ ಬಿನ್ ಸುಬ್ಬರಾವ್ ಇವರಿಂದ ಕೆಳಕಂಡ ಷೆಡ್ಯೂಲ್‌ನಲ್ಲಿ ವಿವರಿಸಿರುವ ಖಾಲಿ ನಿವೇಶನವನ್ನು ಮುಂಗಡ ಹಣ ಪಾವತಿ ಮಾಡಿ ಕ್ರಯಕ್ಕೆ ಪಡೆಯಲು ನಿರ್ಧರಿಸಿರುತ್ತಾರೆ. ಆದ್ದರಿಂದ ಸದರಿ ಸ್ವತ್ತಿನ ಹಕ್ಕು ಬಾಧ್ಯತೆಗಳ ವಿಚಾರದಲ್ಲಿ ತಂಟೆ-ತಕರಾರುಗಳು ಇದ್ದಲ್ಲಿ 15 ದಿನಗಳ ಒಳಗಾಗಿ ಕೊನೆಯಲ್ಲಿ ಕಾಣಿಸಿದ ವಿಳಾಸಕ್ಕೆ ಸಂಪರ್ಕಿಸಲು ಸೂಚಿಸಿದೆ.

**ಷೆಡ್ಯೂಲ್ ವಿವರ**

ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ, ಆವರಗೆರೆ ಗ್ರಾಮದ ರಿ.ಸ.ನಂ : 193/2, 193/5, (ಶ್ರೀರಾಮನಗರ ಹತ್ತಿರ, ಎಸ್.ಎಸ್. ಹೈಟೆಕ್ ಆಸ್ಪತ್ರೆ ಹಿಂಭಾಗ)ರಲ್ಲಿ ವಿಂಗಡಿಸಿದ ಸೈಟುಗಳ ಪೈಕಿ ಸೈಟ್ ನಂ. 112, ಚಾಲ್ತಿ ಡೋರ್ ನಂ. 711/112, ಅಳತೆ 30x40 ಇದಕ್ಕೆ **ಚಕ್ಕುಬಂದಿ : ಪೂರ್ವಕ್ಕೆ :** ಸೈಟ್ ನಂ. 113, **ಪಶ್ಚಿಮಕ್ಕೆ :** ಸೈಟ್ ನಂ. 111, **ಉತ್ತರಕ್ಕೆ :** ಸೈಟ್ ನಂ. 57, **ದಕ್ಷಿಣಕ್ಕೆ :** 9 ಮೀಟರ್ ಅಗಲದ ರಸ್ತೆ.

ಸಂಪರ್ಕಿಸಬೇಕಾದ ವಿಳಾಸ : **ಶ್ರೀಮತಿ ಕೆ.ಬಿ. ಶೈಲಶ್ರೀ**, ವಕೀಲರು,
#1963, ಕೆರನಳ್ಳಿ ಬಸಣ್ಣ, ಇಂಡೋರ್ ಸ್ಟೇಡಿಯಂ ಹತ್ತಿರ,
ಕುಂದುವಾಡ ಕೆರೆ ರೋಡ್, ಎಸ್.ಎಸ್.ಲೇಔಟ್, ಎ ಬ್ಲಾಕ್,
ದಾವಣಗೆರೆ. **ಮೊ : 94486 58502, 08192 463361**

# ಕಾಂಗ್ರೆಸ್‌ಗೆ ಮತ ಕೇಳಲು ಧೈರ್ಯವಿದೆ : ಎಸ್ಸೆಸ್ಸೆಂ



ದಾವಣಗೆರೆ, ಏ.7- ಸಹಕಾರಿ ಕ್ಷೇತ್ರದ ಧುರೀಣರಿಂದ ಪಕ್ಷದ ಗೆಲುವು ಸಾಧ್ಯ. ಆದ್ದರಿಂದ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಪ್ರಭಾ ಅವರನ್ನು ಗೆಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮನವಿ ಮಾಡಿದರು.

ನಗರದ ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ ಭಾನುವಾರ ನಡೆದ 'ಸಮಸ್ತ ಸಹಕಾರಿಗಳ ಬೆಂಬಲ' ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಡಿಡಿಸಿಸಿ ಬ್ಯಾಂಕ್ ಉಳಿಸಿಕೊಳ್ಳಲು ಕಠಿಣ ಪರಿಶ್ರಮ ಪಟ್ಟಿದ್ದೇವೆ. ಇಲ್ಲಿನ ರೈತರಿಗೆ ಸೊಸೈಟಿಯ ಮೂಲಕ ಇನ್ನೂ ಹೆಚ್ಚಿನ ಅನುಕೂಲ ಮಾಡಲಿದ್ದೇವೆ ಎಂದು ಭರವಸೆ ನೀಡಿದರು.

ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಪಂಚ ಗ್ಯಾರಂಟಿಗಳನ್ನು ಜನರಿಗೆ ಅಚ್ಚುಕಟ್ಟಾಗಿ ತಲುಪಿಸಿದ್ದರಿಂದ ನಮಗೆ ಮತ ಕೇಳಲು ಧೈರ್ಯವಿದೆ. ವಿಧಾನಸಭಾ ಚುನಾವಣೆಯಲ್ಲಿ ನೀಡಿದ ಬೆಂಬಲದಂತೆ, ಲೋಕಸಭಾ ಚುನಾವಣೆಯಲ್ಲೂ ಬೆಂಬಲ ನೀಡಿ ಅಭ್ಯರ್ಥಿಯನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಿ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ, ಗ್ರಾಮ ಪಂಚಾಯಿತಿ ಹಾಗೂ ಬೂತ್ ಮಟ್ಟದಲ್ಲಿ ಸಹಕಾರಿ ಕ್ಷೇತ್ರದವರು, ಮಹಿಳಾ ಮತ್ತು ಯುವಕರ ಮತಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಕಾಂಗ್ರೆಸಿಗೆ ಹಾಕಿಸಬೇಕು ಎಂದರು.

ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಮಾತನಾಡಿ, ಸಂವಿಧಾನ ಉಳಿಯಬೇಕೆಂದರೆ ಮೋದಿ ಸೋಲಿಸಬೇಕು. ಅಂಬೇಡ್ಕರ್ ಬರೆದ ಸಂವಿಧಾನ ಬದಲಿಸಲು ಬಿಜೆಪಿಯವರು ಸಂಚು ನಡೆಸಿದ್ದಾರೆ. ಇದನ್ನು ತಪ್ಪಿಸಲು ಕಾಂಗ್ರೆಸ್‌ಗೆ ಮತ ಹಾಕುವಂತೆ ಹೇಳಿದರು.

ನಮ್ಮ ಅಭ್ಯರ್ಥಿಗೆ ಅನ್ಯ ಭಾಷಾಜ್ಞಾನವಿದೆ, ಇಲ್ಲಿನ ಸಮಸ್ಯೆಗಳನ್ನು ಸಂಸತ್ತಿನಲ್ಲಿ ಚರ್ಚಿಸಿ ಜಿಲ್ಲೆಯನ್ನು ಅಭಿವೃದ್ಧಿಗೊಳಿಸುವ ಧೈರ್ಯ ಅವರಿಗಿದೆ. ಆದ್ದರಿಂದ ಬಹುಮತಗಳಿಂದ ಪ್ರಭಾ ಅವರನ್ನು ಗೆಲ್ಲಿಸಿ ಎಂದರು.

ಹರಪನಹಳ್ಳಿ ಶಾಸಕರಾದ ಶ್ರೀಮತಿ ಲತಾ ಮಲ್ಲಿಕಾರ್ಜುನ್ ಮಾತನಾಡಿ, ಬಿಜೆಪಿಯೂ ರೈತ ವಿರೋಧಿ ಸರ್ಕಾರವಾಗಿದೆ. ದೇಶದ ಬೆನ್ನೆಲಬು ಆದ ರೈತನ ಉಳಿವಿಗಾಗಿ ಕಾಂಗ್ರೆಸ್ಸನ್ನು ಗೆಲ್ಲಿಸಬೇಕು ಎಂದು ಹೇಳಿದರು. (4ನೇ ಪುಟಕ್ಕೆ)



**ಸಹಕಾರಿ ಕ್ಷೇತ್ರ ಹೆಮ್ಮರವಾಗಿ ಬೆಳೆಯಲು ಕಾಂಗ್ರೆಸ್ ಪಕ್ಷ ಗೆಲ್ಲಬೇಕು. ಹಿಂದೆ ರೈತರ 72 ಸಾವಿರ ಕೋಟಿ ರೂ.ಗಳ ಸಾಲ ಮನ್ನಾ ಮಾಡುವ ಮೂಲಕ ಕಾಂಗ್ರೆಸ್ ರೈತ ಸ್ನೇಹಿ ಸರ್ಕಾರವಾಗಿದೆ.**

**- ಕೆ.ಎಸ್.ಬಸವಂತಪ್ಪ, ಶಾಸಕ**

## ನಗರದಲ್ಲಿ ಇಂದು ಮಜ್ಜಿಗೆ ವಿತರಣೆ

ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನಿಂದ ಒಂದು ತಿಂಗಳು ನಡೆಸುತ್ತಿರುವ ಮಜ್ಜಿಗೆ ವಿತರಣಾ ಕಾರ್ಯಕ್ರಮಕ್ಕೆ ಪ್ರೊ. ನಿರ್ಮಲಮ್ಮ ಡಾ. ಕರಿಬಸಪ್ಪ, ಆರ್.ಆರ್. ಕುಸಗೂರು, ಡಾ. ಹೆಚ್.ವಿ. ವಾಮದೇವಪ್ಪ ಅವರು ಇಂದಿನ ದಾನಿಗಳಾಗಿದ್ದಾರೆ. ಈ ಸತ್ಕಾರ್ಯಕ್ಕೆ ದಾನ ಮಾಡ ಬಯಸುವವರು ಮಂಜುಳಾ ಬಸವಲಿಂಗಪ್ಪ (7483809312) ಅವರನ್ನು ಸಂಪರ್ಕಿಸಬಹುದು.

## ಬ್ಯಾಡ್ಮಿಂಟನ್ ಶಿಬಿರ

ದಾವಣಗೆರೆ, ಏ. 7 - ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ಕರ್ನಾಟಕ ರಾಜ್ಯ ಬ್ಯಾಡ್ಮಿಂಟನ್ ಸಂಸ್ಥೆ (ಬೆಂಗಳೂರು) ಸಹಯೋಗದೊಂದಿಗೆ ಉಚಿತ ಬ್ಯಾಡ್ಮಿಂಟನ್ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ. ನಾಡಿದ್ದು ದಿನಾಂಕ 9 ರಿಂದ ಬರುವ ಮೇ 31ರವರೆಗೆ ನಗರದ ನೇತಾಜಿ ಸುಭಾಷ್‌ಚಂದ್ರ ಭೋಸ್ ಒಳಾಂಗಣ ಕ್ರೀಡಾಂಗಣದಲ್ಲಿ ಈ ಶಿಬಿರ ನಡೆಯಲಿದೆ ಎಂದು ಅಸೋಸಿಯೇಷನ್ ಅಧ್ಯಕ್ಷ ಎಸ್.ಎಸ್. ಬಸವರಾಜ್, ಕಾರ್ಯದರ್ಶಿ ಡಿ.ಆರ್. ಗಿರಿರಾಜ್ ತಿಳಿಸಿದ್ದಾರೆ. ವಿವರಕ್ಕೆ ಸಂಪರ್ಕಿಸಿ : 98441 07722, 99862 22140, 9110477598.












KA/SK/DVG-028/2024-2026. O/P @ B.V. Nagar P.O. JANATHAVANI - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas